# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 09 ಶೀರ್ಷಿಕೆ ಕೋಡ್: ಕೆಏಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 10–07–2023 ಸೋಮವಾರ ಪುಟ: 4 ಬೆಲೆ : ರೂ.2–00
Volume - 01 Issue - 09 Title- Code: KARKAN 28269 Chitradurga Date: 10-07-2023 Monday Page: 4 Price: Rs. 2-00



ಒಳಪುಟದ ಸುದ್ದಿಗಳು

ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟಿಸಿದ ಬ್ಲಾಕ್ ಕಾಂಗ್ರೆಸ್ 2

ಚನ್ನಸಮುದ್ರ ಸಮೀಪ ಜೋನಿನಲ್ಲಿ ಕರಡಿ ಸೆರೆ: ಕರಡಿ ಸೆರೆಗೆ ಕಾರ್ಯಚರಣೆ 3

ನವ ಚಿತ್ರದುರ್ಗ ನಿರ್ಮಾಣಕ್ಕೆ ಎಲ್ಲಾರೂ ಕೈ ಜೋಡಿಸಿ: ಶಾಸಕ 4


ಫಾಸ್ಟ್ ನ್ಯೂಸ್

## ಅಪರ ಜಿಲ್ಲಾಧಿಕಾರಿಯಾಗಿ ಬಿ.ಟಿ. ಕುಮಾರಸ್ವಾಮಿ ಅಧಿಕಾರ ಸ್ವೀಕಾರ



» ಚಿತ್ರದುರ್ಗ

ಚಿತ್ರದುರ್ಗ ನೂತನ ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಯಾಗಿ ಬಿ.ಟಿ. ಕುಮಾರಸ್ವಾಮಿ ಶುಕ್ರವಾರ ಅಧಿಕಾರ ವಹಿಸಿ ಕೊಂಡರು. ಅಪರ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಟಿ.ಜವರೇಗೌಡ ಅವರನ್ನು ಸರ್ಕಾರ ವರ್ಗಾವಣೆಗೊಳಿಸಿದ್ದು, ಬಿ.ಟಿ.ಕುಮಾರಸ್ವಾಮಿ ಅವರನ್ನು ಅಪರ ಜಿಲ್ಲಾಧಿಕಾರಿಯಾಗಿ ನೇಮಕಗೊಳಿಸಿದೆ. ಬಿ.ಟಿ.ಕುಮಾರ ಸ್ವಾಮಿ ಅವರು ಈ ಹಿಂದೆ ಚಿತ್ರದುರ್ಗ ತಹಶೀಲ್ದಾರ್, ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಆಡಳಿತಾಧಿಕಾರಿ ಸೇರಿದಂತೆ ವಿವಿಧೆಡೆ ಕಾರ್ಯನಿರ್ವಹಿಸಿದ್ದಾರೆ. ಇದೀಗ ಚಿತ್ರದುರ್ಗ ಜಿಲ್ಲೆಗೆ ನೂತನ ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

## ಜುಲೈ 10 ರಂದು ಕೀಟಜನ್ಯ ರೋಗಗಳ ನಿಯಂತ್ರಣ ಕಾರ್ಯಾಗಾರ

» ಚಿತ್ರದುರ್ಗ

ಆರೋಗ್ಯ ಇಲಾಖೆ ವತಿಯಿಂದ ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯಿತಿ ಎದುರಿನ ಡಯ[illegible]ನಲ್ಲಿ ವಿಜ್ಞಾನ ಶಿಕ್ಷಕರಿಗೆ ಕೀಟಜನ್ಯ ರೋಗಗಳ ನಿಯಂತ್ರಣ ಕುರಿತು ಇದೇ ಜುಲೈ 10ರಂದು ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 10.30 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಡಯಟ್ ಉಪನಿರ್ದೇಶಕ ನಾಸಿರುದ್ದಿನ್ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಆರ್.ರಂಗನಾಥ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಕಾಶಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ. ಗಿರೀಶ್ ಘನ ಉಪಸ್ಥಿತಿ ವಹಿಸುವರು. ಮುಖ್ಯ ಅತಿಥಿಗಳಾಗಿ ರಾಜ್ಯ ವಿಜ್ಞಾನ ಪರಿಷನ ಹೆಚ್. ಎಸ್.ಟಿ. ಸ್ವಾಮಿ, ಡಯಟ್ ಉಪನ್ಯಾಸಕ ನಿತ್ಯಾನಂದ ಭಾಗವಹಿಸುವವರು. ಬೆಳಿಗ್ಗೆ 11 ರಿಂದ 12 ಗಂಟೆಯವರೆಗೆ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಕಾಶಿ ಹಾಗೂ ಮಧ್ಯಾಹ್ನ 12.30 ರಿಂದ 1.30 ರವರೆಗೆ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಶ್ರೀಧರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಟಿ. ಮಲ್ಲಿಕಾರ್ಜನ ಅವರು ಅವರು ಕೀಟಜನ್ಯ ರೋಗಗಳ ವಿಷಯ ಕುರಿತು ಉಪನ್ಯಾಸ ನೀಡುವವರು

# ಹೊರಗುತ್ತಿಗೆ ನೌಕರಿಯಲ್ಲೂ ಮೀಸಲಾತಿ ಜಾರಿಗೆ ಚಿಂತನೆ: ಸಿದ್ದರಾಮಯ್ಯ ಘೋಷಣೆ

» ನಮ್ಮ ಜನ ವಾರ್ತೆ ಬೆಂಗಳೂರು

ರಾಜ್ಯ ಸರ್ಕಾರದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದಾಗಿ ನಾವು ಪ್ರಣಾಳಿಕೆಯಲ್ಲಿ ಹೇಳಿದ್ದೆವು. ಅದರಂತೆ ಹಂತ ಹಂತವಾಗಿ ಭರ್ತಿ ಮಾಡಿಕೊಳ್ಳುತ್ತೇವೆ. ಅಲ್ಲಿಯವರೆಗೂ ಹೊರ ಗುತ್ತಿಗೆ ನೇಮಕಾತಿಗಳಲ್ಲೂ ಮೀಸಲಾತಿ ತರುವ ಉದ್ದೇಶ ಹೊಂದಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.



ಜನಮನ ಪ್ರತಿಷ್ಠಾನ ಮತ್ತು ಸಮತಾ ಅಧ್ಯಯನ ಕೇಂದ್ರ ದೇವರಾಜ ಅರಸು ಭವನದಲ್ಲಿ ಹಮ್ಮಿಕೊಂಡಿದ್ದ ಪ್ರಬುದ್ಧ ಕರ್ನಾಟಕ ಜನಮನ ಸಮಾವೇಶದ ಸಂವಾದದಲ್ಲಿ ಸಭೆಯಲ್ಲಿ ಭಾಗವಹಸಿದ ಜನರ ಪ್ರಶ್ನೆಗಳಿಗೆ ಉತ್ತರಿಸಿದರು.

ಜಾಗತಿಕ ಮಟ್ಟದ ಬಂಡವಾಳವನ್ನು ಆಕರ್ಷಿಕಸಬೇಕು ಎಂದು ಶಾಂತಿ, ಸುವ್ಯವಸ್ಥೆ ಮತ್ತು ಉದ್ಯಮ ಸ್ನೇಹಿ ವಾತಾವರಣ ಇರಬೇಕು. ಬಂಡವಾಳ ಹೂಡಿಕೆಯಿಂದ ಉದ್ಯೋಗ ಸೃಷ್ಟಿಯಾಗಿ ಜಿಡಿಪಿ ಹೆಚ್ಚುತ್ತದೆ. ಹೀಗಾಗಿ ಜಾತಿ–ಧರ್ಮದ ಸಂಘರ್ಷ ಇಲ್ಲದ ಶಾಂತಿಯುತ ಸಮಾಜ ಇರಬೇಕು ಎಂದರು.ನಮ್ಮ ಯುವ ಸಮೂಹದ ಶಕ್ತಿ ಮತ್ತು ಚೈತನ್ಯ ದುರುಪಯೋಗ ಆಗಬಾರದು, ಜಾತಿ–ಧರ್ಮದ ಹೆಸರಲ್ಲಿ ಗಲಭೆಗಳಿಗೆ ಯುವ ಸಮೂಹ ದುರ್ಬಳಕೆ ಆಗುವುದನ್ನು ತಪ್ಪಿಸುವ ರೀತಿಯಲ್ಲಿ ನಮ್ಮ ಸರ್ಕಾರ ನೀತಿ ರೂಪಿಸಿದೆ. ಇದಕ್ಕಾಗಿ ಕೌಶಲ್ಯ ತರಬೇತಿ ಜತೆಗೆ ನಿರುದ್ಯೋಗಿ ಯುವ ಸಮೂಹಕ್ಕೆ 24 ತಿಂಗಳ ಕಾಲ ಯುವನಿಧಿ ನೀಡಲು ನಿರ್ಧರಿಸಿದ್ದೇವೆ ಎಂದರು.

**ಶರಾವತಿ ಸಂತ್ರಸ್ಥರಿಗೆ ಶಾಶ್ವತ ಪರಿಹಾರ:** ಮಲೆನಾಡಿನ ಜಿಲ್ಲೆಗಳಲ್ಲಿ ಹಲವು ವರ್ಷಗಳಿಂದ ಇರುವ ಶರಾವತಿ ಸಂತ್ರಸ್ಥರ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುತ್ತೇವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಭರವಸೆ ನೀಡಿದರು.

**ಸಮ ಸಮಾಜ ಬಂದರೆ ಶಾಂತಿಯ ತೋಟ:** ಹಿಂದಿನ ಸರ್ಕಾರದಲ್ಲಿ ಅನೈತಿಕ ಪೊಲೀಸ್ ಗಿರಿ ಅತ್ಯಂತ ನಿರ್ಲಜ್ಜತನದಿಂದ ಆಚರಿಸಲ್ಪಡುತ್ತಿತ್ತು. ನಾವು ಅಧಿಕಾರಕ್ಕೆ ಬರುತ್ತಿದ್ದಂತೆ ಅನೈತಿಕ ಪೊಲೀಸ್ ಗಿರಿಗೆ ಬರೆ ಎಳೆದಿದ್ದೇವೆ. ಸಮ ಸಮಾಜ ನಿರ್ಮಾಣ ಆಗದ ಹೊರತು ದಲಿತರ, ಅಲ್ಪ ಸಂಖ್ಯಾತರ, ಹಿಂದುಳಿದವರ ಮೇಲೆ ದೌರ್ಜನ್ಯ ಹೋಗುವುದಿಲ್ಲ. ಹೀಗಾಗಿ ಕುವೆಂಪು ಅವರ ಮಾತಿನಂತೆ ರಾಜ್ಯವನ್ನು ಶಾಂತಿಯ ತೋಟ ಮಾಡುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಪ್ರಯತ್ನಿಸುತ್ತಿದೆ ಎಂದು ಹೇಳಿದರು.

**ಅಕಾಡೆಮಿಗಳ ನೇಮಕಾತಿಗೆ ಸಮಿತಿ ರಚನೆ:** ಅಕಾಡೆಮಿ, ಪ್ರಾಧಿಕಾರಗಳಿಗೆ ನೇಮಕ ಮಾಡಲು ಒಂದು ಆಯ್ಕೆ ಸಮಿತಿ ಮಾಡುತ್ತೇವೆ. ಈ ಆಯ್ಕೆ ಸಮಿತಿ ಮತಾಂಧ ಮತ್ತು ಸಮಾಜ ವಿಭಜಿಸುವ ಮನಸ್ಥಿತಿಯವರು ಒಳಗೆ ಪ್ರವೇಶಿಸದಂತೆ ಸ್ಕ್ರೀನಿಂಗ್ ನಡೆಸುತ್ತಾರೆ ಎಂದರು.

**ಮುಟ್ಟಿನ ರಜೆ ಪರಿಶೀಲನೆ:** ಮಹಿಳಾ ಉದ್ಯೋಗಿ ಹಾಗೂ ವಿದ್ಯಾರ್ಥಿನಿಯರಿಗೆ ರಜೆ ಘೋಷಿಸಬೇಕು ಎನ್ನುವ ಬೇಡಿಕೆಯೊಂದಕ್ಕೆ ಉತ್ತರಿಸಿದ ಸಿಎಂ ಈ ಬಗ್ಗೆ ಪರಿಶೀಲಿಸಿ ಯೋಗ್ಯ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದರು.

ಶೂದ್ರರಂತೆ ಮಹಿಳೆಯರೂ ಶತಮಾನಗಳ ಕಾಲ ಶಿಕ್ಷಣದಿಂದ ವಂಚಿತರಾಗಿದ್ದರು. ಸಾಮಾಜಿಕವಾಗಿ, ಆರ್ಥಿಕವಾಗಿ ಸದೃಡರಾದರೆ ಶೋಷಣೆ, ದೌರ್ಜನ್ಯ ಕಡಿಮೆಯಾಗುತ್ತದೆ. ಸರ್ಕಾರಿ ಭೂಮಿ ಒತ್ತುವರಿ ಕುರಿತು ಸಮೀಕ್ಷೆ ಮಾಡಲಾಗುವುದು. ಭೂ ಹೀನರಿಗೆ ಭೂಮಿ ಕೊಡುವ ಬಗ್ಗೆ ಪರಿಶೀಲಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

# ಬಜೆಟ್ ವೇಳೆ ಶಾಸಕರ ಕುರ್ಚಿಯಲ್ಲಿ ಕುಳಿತ ಆರೋಪದಡಿ ಮೊಳಕಾಲ್ಮುರು ವಕೀಲ ಬಂಧನ


» ಬೆಂಗಳೂರು

ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಮಂಡಿಸುತ್ತಿದ್ದ ಸಂದರ್ಭದಲ್ಲಿ, ದೇವದುರ್ಗ ಕ್ಷೇತ್ರದ ಶಾಸಕಿ ಕರೆಮ್ಮ ಜಿ. ನಾಯಕ ಅವರ ಕುರ್ಚಿಯಲ್ಲಿ ಕುಳಿತಿದ್ದ ಆರೋಪದಡಿ ವಕೀಲ ತಿಪ್ಪೇರುದ್ರಪ್ಪ (76) ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಚಿತ್ರದುರ್ಗದ ತಿಪ್ಪೇರುದ್ರಪ್ಪ, ಮೊಳಕಾಲ್ಮುರು ಕ್ಷೇತ್ರದ ಶಾಸಕ ಎಂದು ಹೇಳಿಕೊಂಡು ಒಳಗೆ ಪ್ರವೇಶಿಸಿದ್ದರು. ಅವರನ್ನು ಮಾರ್ಷಲ್‌ಗಳು ಹಿಡಿದು, ಠಾಣೆಗೆ ಒಪ್ಪಿಸಿದ್ದಾರೆ. ವಿಧಾನಸಭೆ ದಂಡನಾಯಕ ಎಚ್.ಎಲ್. ಜಯಕೃಷ್ಣ ನೀಡಿರುವ ದೂರು ಆಧರಿಸಿ ಆರೋಪಿ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ತಿಪ್ಪೇರುದ್ರಪ್ಪ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ' ಎಂದು ಪೊಲೀಸ್ ಮೂಲಗಳು ಹೇಳಿವೆ.

'ಆರೋಪಿ ತಿಪ್ಪೇರುದ್ರಪ್ಪ, ಮಾನಸಿಕ ಅಸ್ವಸ್ಥನಂತೆ ವರ್ತಿಸುತ್ತಿದ್ದಾರೆ. 'ನಾನೊಬ್ಬ ಶಾಸಕ. ಸದ್ಯದಲ್ಲೇ ಸಚಿವ ಆಗುತ್ತೇನೆ' ಎನ್ನುತ್ತಿದ್ದಾರೆ. 'ನಾನು ವಕೀಲ' ಎಂಬುದಾಗಿಯೂ ಆಗಾಗ ಹೇಳುತ್ತಿದ್ದಾರೆ. ಸಮಗ್ರ ವಿಚಾರಣೆ ನಡೆಸಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು' ಎಂದು ಮೂಲಗಳು ತಿಳಿಸಿವೆ.

ವೀಕ್ಷಕರ ಪಾಸ್ ಪಡೆದು ಪ್ರವೇಶ: 'ವಿಧಾನಸೌಧಕ್ಕೆ ಬೆಳಿಗ್ಗೆ ಬಂದಿದ್ದ ತಿಪ್ಪೇರುದ್ರಪ್ಪ, ಸರದಿ ಸಾಲಿನಲ್ಲಿ ನಿಂತು ವೀಕ್ಷಕರ ಪಾಸ್ ಪಡೆದುಕೊಂಡಿದ್ದರು. ಮಧ್ಯಾಹ್ನ 12.10ರ ಸುಮಾರಿಗೆ ವೀಕ್ಷಕರ ಗ್ಯಾಲರಿಗೆ ಹೋಗುವ



ಬದಲು, ಶಾಸಕರ ಪ್ರವೇಶ ದ್ವಾರದ ಬಳಿ ತೆರಳಿದ್ದರು' ಎಂದು ಪೊಲೀಸ್ ಮೂಲಗಳು ಹೇಳಿವೆ.'ಆರೋಪಿಯನ್ನು ತಡೆದಿದ್ದ ಮಾರ್ಷಲ್‌ಗಳು, 'ನೀವು ಯಾರು' ಎಂದು ಪ್ರಶ್ನಿಸಿದ್ದರು. 'ನಾನು ಮೊಳಕಾಲ್ಮುರು ಕ್ಷೇತ್ರದ ಶಾಸಕ. ಒಳಗೆ ಬಿಡಿ' ಎಂಬುದಾಗಿ ಜೋರು ಧ್ವನಿಯಲ್ಲಿ ಹೇಳಿದ್ದರು. ಹೊಸ ಶಾಸಕ ಇರಬಹುದೆಂದು ತಿಳಿದ ಮಾರ್ಷಲ್‌ಗಳು ಆರೋಪಿಯನ್ನು ಒಳಗೆ ಬಿಟ್ಟಿದ್ದರು.''ಶಾಸಕರ ಜೊತೆಗೆ ವಿಧಾನಸೌಧದೊಳಗೆ ಹೋಗಿದ್ದ ಆರೋಪಿ, ಶಾಸಕಿ ಕರೆಮ್ಮ ಜಿ. ನಾಯಕ ಕುರ್ಚಿ ಮೇಲೆ 15 ನಿಮಿಷ ಕುಳಿತಿದ್ದರು. ಆರೋಪಿಯನ್ನು ಗಮನಿಸಿ ಅನುಮಾನಗೊಂಡಿದ್ದ ಶಾಸಕರೊಬ್ಬರು ಸಭಾಧ್ಯಕ್ಷ ಯು.ಟಿ.ಖಾದರ್ ಬಳಿ ಹೋಗಿ ವಿಷಯ ತಿಳಿಸಿದ್ದರು. ಅಷ್ಟರಲ್ಲೇ ಆರೋಪಿಯನ್ನು ಮಾರ್ಷಲ್‌ಗಳು ಹಿಡಿದು ವಿಧಾನಸೌಧದಿಂದ ಹೊರಗೆ ಕರೆತಂದಿದ್ದರು' ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಆರೋಪಿ, ವಕೀಲ ಎಂಬುದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ. ವಿಧಾನಸೌಧ ಭದ್ರತಾ ಸಿಬ್ಬಂದಿ ಕರ್ತವ್ಯ ಲೋಪವೂ ಎದ್ದು ಕಾಣುತ್ತಿದೆ' ಎಂದು ಹೇಳಿವೆ.

## ಸ್ಟೇನೋಗ್ರಾಫರ್ ಆಗಿ ತಿಪ್ಪೇರುದ್ರಪ್ಪ ಸೇವೆ

» ಚಿತ್ರದುರ್ಗ



ಶುಕ್ರವಾರದಂದು ವಿಧಾನಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಬಜೆಟ್ ಮಂಡನೆ ವೇಳೆ ಭದ್ರತಾಲೋಪ ನಡೆದಿತ್ತು. ಈ ವ್ಯಕ್ತಿ ಚಿತ್ರದುರ್ಗ ಜಿಲ್ಲೆಯವರು ಎಂಬುದು ಸಹ ದೃಢಪಡಿಸಿದರು.

ಈ ವಿಷಯಕ್ಕೆ ಸಿ.ಡಿ.ತಿಪ್ಪೇರುದ್ರಪ್ಪ ಎಂಬುವವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಚಿತ್ರದುರ್ಗ ಮೂಲದ ಆರೋಪಿ ಸಿ.ಡಿ.ತಿಪ್ಪೇರುದ್ರಪ್ಪ ಅವರು ಚಿತ್ರದುರ್ಗ ಕೋರ್ಟ್‌ನಲ್ಲಿ ಸ್ಟೆನೋಗ್ರಾಫರ್ ಆಗಿ 10 ವರ್ಷಗಳ ಹಿಂದೆ ಸೇವೆ ಸಲ್ಲಿಸಿ ವಿಆರ್ ಎಸ್ ಪಡೆದಿದ್ದರು ಎಂದು ತಿಪ್ಪೇರುದ್ರಪ್ಪನವರ ಬಗ್ಗೆ ಚಿತ್ರದುರ್ಗ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಶಿವು ಯಾದವ್ ಮಾಹಿತಿ ನೀಡಿದ್ದಾರೆ. ಪ್ರತಿ ಕೋರ್ಟ್ ಕಲಾಪ ವೇಳೆ ಕೆಲ ಹೊತ್ತು ಕೂತು ಹಿಂದಿರುಗುತ್ತಿದ್ದರು. ತಿಪ್ಪೇರುದ್ರಪ್ಪ ಯಾರೊಂದಿಗೂ ಹೆಚ್ಚಾಗಿ ಮಾತನಾಡುತ್ತಿರಲಿಲ್ಲ. ತಿಪ್ಪೇರುದ್ರಪ್ಪಗೆ ವಯಸ್ಸಾಗಿದೆ,ಅವರು ಉತ್ತವ ವ್ಯಕ್ತಿ ಮತ್ತು ವಕೀಲರು ಸಹ ಆಗಿ ಸೇವೆ ಮಾಡಿದ್ದರು. ಇವರು ಗೊಂದಲದಿಂದ ಪ್ರವೇಶಿಸಿರಬಹುದು ಎಂದು ತಿಳಿಸಿದರು.

## ಹಾಲಿಗೆ 5 ರೂ ಪ್ರೋತ್ಸಾಹ ಧನ ನೀಡಲು ಚಿಂತನೆ: ಸಚಿವರಾಜಣ್ಣ

» ನಮ್ಮ ಜನ ವಾರ್ತೆ ಮೈಸೂರು



ಹಾಲಿಗೆ ಮತ್ತೆ 5 ರೂಪಾಯಿ ಪ್ರೋತ್ಸಾಹ ಧನ ನೀಡುವ ಉದ್ದೇಶವಿದೆ. ಪ್ರತಿ ಲೀಟರ್ ಹಾಲಿಗೆ 5 ರೂ. ಹೆಚ್ಚುವರಿ ಪ್ರೋತ್ಸಾಹ ಧನ ನೀಡಲು ಸರ್ಕಾರ ಚಿಂತನೆ ನಡೆಸಿದೆ. ಸಹಕಾರ ಸಚಿವ ಕೆ.ಎನ್. ರಾಜಣ್ಣ ಈ ಬಗ್ಗೆ ಮಾಹಿತಿ ನೀಡಿ, ಈಗಾಗಲೇ ಸರ್ಕಾರದಿಂದ 5 ರೂಪಾಯಿ ಪ್ರೋತ್ಸಾಹಧನ ನೀಡುತ್ತಿದ್ದು, ಹೈನುಗಾರಿಕೆ ವೆಚ್ಚ ಹೆಚ್ಚಾದ ಹಿನ್ನೆಲೆಯಲ್ಲಿ ಮತ್ತೆ ಲೀಟರ್ ನೀಡುವ 5 ರೂ.ಚಿಂತನೆ ಇದೆ. ಮಂಗಳವಾರ ಸಂಪುಟ ಸಭೆಯಲ್ಲಿ ಈ ಬಗ್ಗೆ ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದರು. ಬೇರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಹಾಲು ಖರೀದಿ ಮತ್ತು ಮಾರಾಟ ದರ ಕಡಿಮೆ ಇದ್ದು, ಹಾಲು ಉತ್ಪಾದಕರಿಗೆ ನೆರವಾಗಬೇಕಿದೆ. ಹೀಗಾಗಿ ಹೈನುಗಾರರು ಮತ್ತು ಗ್ರಾಹಕರಿಗೆ ಹೊರೆಯಾಗದಂತೆ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

## ಗ್ರಾ.ಪಂ. ಸದಸ್ಯರು 3 ತಿಂಗಳಲ್ಲಿ ಆಸ್ತಿ ವಿವರ ಸಲ್ಲಿಸುವುದು ಕಡ್ಡಾಯ

» ಬೆಂಗಳೂರು

ವಿವರ ಸಲ್ಲಿಕೆ ಕುರಿತಂತೆ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದ ಮೂರು ತಿಂಗಳ ಒಳಗಾಗಿ ಆಸ್ತಿ ವಿವರ ಸಲ್ಲಿಸುವುದು ಕಡ್ಡಾಯವೆಂದು ತಿಳಿಸಲಾಗಿದ್ದು, ಒಂದೊಮ್ಮೆ ಇದಕ್ಕೆ ವಿಫಲವಾದರೆ ಶೋಕಾಸ್ ನೋಟಿಸ್ ನೀಡದೆಯೂ ಸದಸ್ಯತ್ವದಿಂದ ಅನರ್ಹಗೊಳಿಸಬಹುದು ಎಂದು ಅಭಿಪ್ರಾಯ ಪಟ್ಟಿದೆ.**ಪ್ರಕರಣದ ವಿವರ:** ನಿಗದಿತ ಅವಧಿ ಒಳಗೆ ಆಸ್ತಿ ವಿವರ ಸಲ್ಲಿಸದ ಕಾರಣಕ್ಕೆ ಕಲಬುರಗಿ ಜಿಲ್ಲೆ ಅಳಂದ ತಾಲೂಕಿನ ಮೊಘಾ ಗ್ರಾಮ ಪಂಚಾಯಿತಿ ಸದಸ್ಯೆ ಲಲಿತಾಬಾಯಿ ಪಾಟೀಲ್ ಅವರನ್ನು ರಾಜ್ಯ ಚುನಾವಣಾ ಆಯೋಗ ಸದಸ್ಯತ್ವದಿಂದ ಅನರ್ಹಗೊಳಿಸಿದ್ದು ಇದನ್ನು ಪ್ರಶ್ನಿಸಿ ಲಲಿತಾ ಬಾಯಿ ಹೈಕೋರ್ಟ್ ಮೆಟ್ಟಿಲೇರಿದ್ದರು.

ಪುಟ ↘ 3

ಪ್ರಮುಖ ಸುದ್ದಿ

# ಹೊಸದುರ್ಗ ಸುತ್ತ ಭಯ ಸೃಷ್ಟಿಸಿದ್ದ ಕರಡಿ ಸೆರೆ

» ಹೊಸದುರ್ಗ





ಕಳೆದ ಒಂದು ವಾರಗಳಿಂದ ಪಟ್ಟಣದ ಗೌಸಿಯಾ ನಗರ ಬಡಾವಣೆ,ಕಲ್ಲೇಶ್ವರ ಬಡಾವಣೆ, ಬನಶಂಕರಿ ಬಡಾವಣೆ, ಸಿದ್ದರಾಮನಗರ ಬಡಾವಣೆ, ಕುಂಚಿಟಿಗ ಮಠದ ಸಮೀಪ ಹಾಗೂ ಇನ್ನಿತರ ಕಡೆಗಳಲ್ಲಿ ಕರಡಿಗಳು ಕಾಣಿಸಿಕೊಂಡು, ಸ್ಥಳೀಯ ನಿವಾಸಿಗಳು ಭಯಭೀತರಾಗುವಂತೆ ಮಾಡಿದ್ದವು. ಈ ಹಿನ್ನಲೆಯಲ್ಲಿ ಎಚ್ಚೆತ್ತ ಅರಣ್ಯ ಇಲಾಖೆ ಬೆಂಗಳೂರು ವಿಶೇಷ ತಂಡ ಹಾಗೂ ಸ್ಥಳೀಯರ ಸಹಾಯದೊಂದಿಗೆ ಶುಕ್ರವಾರ ಕರಡಿಯೊಂದನ್ನು ಸೆರೆ ಹಿಡಿಯಲಾಗಿದೆ.

ಕರಡಿಯೊಂದು ಶುಕ್ರವಾರ ಬೆಳಗ್ಗೆ 6,30 ರ ಸುಮಾರಿಗೆ ಪಟ್ಟಣದ ಅಯ್ಯಪ್ಪ ಸ್ವಾಮಿ ದೇವಾಲಯದ ಹಿಂಭಾಗವಿರುವ ಖಾಲಿ ನಿವೇಶನಯೊಂದರ ಜಾಗದಲ್ಲಿ ಬೆಳೆದಿದ್ದ ಜಾಲಿ ಪೊದೆಯಲ್ಲಿ ಕಾಣಿಸಿಕೊಂಡಿತ್ತು. ಕರಡಿ ನೋಡಿದ ಸ್ಥಳೀಯರು ಅರಣ್ಯ ಇಲಾಖೆಗೆ ಮಾಹಿತಿ ತಿಳಿಸಿದ್ದಾರೆ. ತಕ್ಷಣವೇ ಸ್ಥಳಕ್ಕೆ ಬಂದ ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಬೆಂಗಳೂರಿನಿಂದ ಕರಡಿ ಹಿಡಿಯಲು ಬಂದಿದ್ದ ವಿಶೇಷ ತಂಡ ಹಾಗೂ ಸ್ಥಳೀಯರ ಸಹಕಾರದೊಂದಿಗೆ ಬಲೆ, ಜೆಸಿಬಿ ಬಳಸಿಕೊಂಡು ಕರಡಿಗೆ ಪ್ರಜ್ಞೆತಪ್ಪುವ ಇಂಜೆಕ್ಷನ್ ಹಾಕದರು. ನಂತರ ಕರಡಿ ಪ್ರಜ್ಞೆ ತಪ್ಪಿದ ಬಳಿಕ ಕರಡಿಯನ್ನು ಬೋನ್ ನಲ್ಲಿ ಹಾಕಿ, ಅರಣ್ಯ ಇಲಾಖೆಯ ಕಚೇರಿಯ ಆವರಣಕ್ಕೆ ಸ್ಥಳಾಂತರಿಸಲಾಯಿತು. ಬೆಳ್ಳಂಬೆಳಗ್ಗೆ ಕರಡಿ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸುತ್ತಮುತ್ತಲ ಬಡಾವಣೆಗಳ ಕೆಲ ಮಕ್ಕಳು ಶಾಲಾ ತರಗತಿಗಳಿಗೆ ರಜೆ ಹಾಕಿ, ಮನೆಯಲ್ಲಿಯೇ ಉಳಿದಿದ್ದರು. ಇನ್ನು ಭೈರಪ್ಪನ ಬೆಟ್ಟದಲ್ಲಿ ಕರಡಿಗಳು ಇರುವುದು ಅರಣ್ಯ ಇಲಾಖೆಗೆ ಕಂಡುಬಂದಿದ್ದು, ಉಳಿದಿರುವ ಕರಡಿಗಳ ಸೆರೆಗಾಗಿ ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ತಂಡ ಕಾರ್ಯಚರಣೆ ಮುಂದುವರೆಸಿದ್ದಾರೆ.




## ಫಾಸ್ಟ್ ನ್ಯೂಸ್

### ಪ್ರಥಮ ಮುದ್ರಣ ಪುಸ್ತಕಗಳನ್ನು ಆಯ್ಕೆಗೆ ಅರ್ಜಿ ಆಹ್ವಾನ

» ದಾವಣಗೆರೆ

ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಂಥಾಲಯಗಳಿಗೆ ಏಕಗವಾಕ್ಷಿ, ಯೋಜನೆಯಡಿ 2023ನೇ ಸಾಲಿನ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯ ಆಯ್ಕೆಗಾಗಿ ಪ್ರಥಮ ಮುದ್ರಣವಾಗಿ ಪ್ರಕಟಣೆಯಾದ ಲೇಖಕರು, ಸಾಹಿತಿಗಳು ಹಾಗೂ ಪ್ರಕಾಶಕರಿಂದ ಅರ್ಜಿ ಆಹ್ವಾನಿಸಲಾಗಿದೆ.ಪ್ರಸಕ್ತ ವರ್ಷದ ಜನವರಿ 1 ರಿಂದ ಜೂನ್ 30 ರ ಅವಧಿಯಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಸಾಹಿತ್ಯ, ಕಲೆ, ವಿಜ್ಞಾನ, ವೃತ್ತಿ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಆದಾಯ ಉತ್ಪಾದನಾ ಯೋಜನೆ, ಸ್ಪರ್ಧಾತ್ಮಕ, ಪಠ್ಯ ಪುಸ್ತಕ, ಸಾಂದರ್ಭಿಕ ಮತ್ತು ಪರಾಮರ್ಶನ ಕೃತಿಗಳು ಹಾಗೂ ಮಕ್ಕಳ ಸಾಹಿತ್ಯ/ನವಸಾಕ್ಷರರ ಕೃತಿಗಳು ಇತ್ಯಾದಿ ವಿಷಯಗಳ ಕನ್ನಡ, ಆಂಗ್ಲ, ಇತರೆ ಭಾರತೀಯ ಭಾಷೆಯ ಗ್ರಂಥಗಳು ಆಯ್ಕೆಗೆ ಅರ್ಹವಾಗಿರುತ್ತವೆ. ಜಿಲ್ಲೆಯ ಅರ್ಹ ಲೇಖಕರು, ಸಾಹಿತಿಗಳು ಹಾಗೂ ಪ್ರಕಾಶಕರು ಕಡ್ಡಾಯವಾಗಿ ಪುಸ್ತಕದ ಒಂದು ಪ್ರತಿ, ಕಾಪಿರೈಟ್‌ನ ನೋಂದಣಿಯ ದೃಢೀಕರಿಸಿದ ನಕಲು ಪ್ರತಿ ಹಾಗೂ ವಿತರಕರು ಸರಬರಾಜು ಹಕ್ಕನ್ನು ಪಡೆದಿದ್ದಲ್ಲಿ ಅದರ ನಕಲು ಪ್ರತಿಯನ್ನು ಅರ್ಜಿಯೊಂದಿಗೆ ಜುಲೈ 30 ರೊಳಗೆ ಗ್ರಂಥಸ್ವಾಮ್ಯ ವಿಭಾಗ, ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ. ಬೆಂಗಳೂರು ಇಲ್ಲಿಗೆ ಕಾಪಿರೈಟ್ ಮಾಡಿಸಿ, ಜುಲೈ 31 ರಂದು ಸಂಜೆ 5 ಗಂಟೆಯೊಳಗೆ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ನಿರ್ದೇಶಕರ ಕಚೇರಿಗೆ ಸಲ್ಲಿಸಲು ಜಿಲ್ಲಾ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ಪಿ.ಆರ್ ತಿಪ್ಪೇಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿ.ಆರ್.ಸಿ ಸಂಸ್ಥೆಯಿಂದ ಡಿ.ಇಡಿ. ವಿಶೇಷ ಶಿಕ್ಷಣ ಕೋರ್ಸ್‌ಗಳಿಗೆ ಅರ್ಜಿ

» ದಾವಣಗೆರೆ

ನಗರದ ದಿವ್ಯಾಂಗ ವ್ಯಕ್ತಿಗಳ ಕೌಶಲ್ಯ ಅಭಿವೃದ್ಧಿ ಪುನರ್ವಸತಿ ಮತ್ತು ಸಬಲೀಕರಣಗಳ ಸಂಯುಕ್ತ ಪ್ರಾದೇಶಿಕ ಕೇಂದ್ರದಿಂದ 2023-24 ನೇ ಸಾಲಿನ ಡಿ.ಇಡಿ. ವಿಶೇಷ ಶಿಕ್ಷಣ (ಐ.ಡಿ.ಡಿ) ಮತ್ತು ಡಿ.ಇಡಿ. ವಿಶೇಷ ಶಿಕ್ಷಣ (ಹೆಚ್.ಐ) ಕೋರ್ಸ್‌ಗಳ ಪ್ರವೇಶಕ್ಕೆ ದಿವ್ಯಾಂಗ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿಸಲ್ಲಿಸುವ ಅಭ್ಯರ್ಥಿಗಳು ಪಿ.ಯು.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಠ 50% ಹಾಗೂ ಪರಿಶಿಷ್ಟ ವರ್ಗ ಪಂಗಡದವರು ಕನಿಷ್ಠ 45% ಅಂಕಗಳಿಂದ ಉತ್ತೀರ್ಣರಾಗಿರಬೇಕು. ಆಸಕ್ತರು ಅಗತ್ಯ ದಾಖಲೆಗಳೊಂದಿಗೆ ಜುಲೈ 15 ರೊಳಗಾಗಿ ದಿವ್ಯಾಂಗ ವ್ಯಕ್ತಿಗಳ ಕೌಶಲ್ಯ ಅಭಿವೃದ್ಧಿ ಪುನರ್ವಸತಿ ಮತ್ತು ಸಬಲೀಕರಣಗಳ ಸಂಯುಕ್ತ ಪ್ರಾದೇಶಿಕ ಕೇಂದ್ರ, ದೇವರಾಜ್ ಅರಸ್ ಬಡಾವಣೆ, ಬಿ ಬ್ಲಾಕ್ ಶಿವಾಲಿ ಟಾಕೀಸ್ ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ : 08192-233464/465, ಮೋ.ಸಂ : 8746043062, 9490020080 ಅಥವಾ ವೆಬ್‌ಸೈಟ್:director.crcdvg@gmail.com/ academics.crcdvg@gmail.com / https://crcdvg.nic.in ಸಂಪರ್ಕಿಸಲು ಥಮರೈ ಸೆಲ್ವಾನ್ ಕೋರಲಾಗಿದೆ.

### ಕರಾರಮುವಿ ಯಿಂದ ವಿವಿಧ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ

» ದಾವಣಗೆರೆ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 2022-23 ನೇ ಶೈಕ್ಷಣಿಕ ಸಾಲಿನ (ಜುಲೈ ಆವೃತ್ತಿ) ಪ್ರಥಮ ವರ್ಷದ ವಿವಿಧ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಬಿ.ಎ, ಬಿ.ಕಾಂ, ಬಿ.ಎಸ್.ಸಿ, ಬಿ.ಲಿಬ್.ಐ.ಎಸ್‌ಸಿ, ಬಿ.ಸಿ.ಎ., ಬಿ.ಬಿ.ಎ., ಬಿ.ಎಸ್.ಡಬ್ಲ್ಯೂ, ಎಂ.ಎ, ಎಂ.ಕಾಂ, ಎಂ.ಎ.-ಎಂ.ಸಿ.ಜೆ., ಎಂ.ಲಿಬ್.ಐ.ಎಸ್‌ಸಿ, ಎಂ.ಬಿ.ಎ., ಎಂ.ಎಸ್.ಸಿ., ಎಂ.ಸಿ.ಎ., ಎಂ.ಎಸ್. ಡಬ್ಲ್ಯೂ., ಸ್ನಾತಕ, ಸ್ನಾತಕೋತ್ತರ ಪದವಿಗಳಿಗೆ ಮತ್ತು ಪಿ.ಜಿ-ಡಿಪ್ಲೊಮಾ, ಡಿಪ್ಲೋಮಾ, ಸರ್ಟಿಫಿಕೇಟ್ ಕೋರ್ಸಗಳಿಗೆ ಅರ್ಜಿ ಆಹ್ವಾನಿಸಿದ್ದು, ಬಿ.ಪಿ.ಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿನಿಯರಿಗೆ, ಡಿಫೆನ್ಸ್ ಹಾಗೂ ಮಾಜಿ ಸೈನಿಕ ವಿದ್ಯಾರ್ಥಿಗಳಿಗೆ ಮತ್ತು ಆಟೋ, ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಬೋಧನಾ ಶುಲ್ಕದಲ್ಲಿ ರಿಯಾಯಿತಿ ಹಾಗೂ ಕೋವಿಡ್-19 ನಿಂದ ಮೃತಪಟ್ಟವರ ಮಕ್ಕಳು, ತೃತೀಯ ಲಿಂಗಿಗಳು, ದೃಷ್ಟಿಹೀನ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ಅಲ್ಲದೆ ಎರಡು ಶೈಕ್ಷಣಿಕ ಕೋರ್ಸುಗಳನ್ನು ಏಕಕಾಲದಲ್ಲಿ ಒಂದು ಭೌತಿಕ ಕ್ರಮದಲ್ಲಿ ಮತ್ತೊಂದು ದೂರಶಿಕ್ಷಣ ಕ್ರಮದಲ್ಲಿ ಓದಲು ಅವಕಾಶವಿದೆ. ಆಸಕ್ತ ಅಭ್ಯರ್ಥಿಗಳು ಕರಾಮುವಿಯ ಅಧಿಕೃತ ವೆಬ್‌ಸೈಟ್ www.ksoumysuru.ac.in ನ ಆನ್‌ಲೈನ್ ಅಡ್ಮಿಶನ್ ಪೋರ್ಟಲ್ ಮೂಲಕ ಅರ್ಜಿಯನ್ನು ಭರ್ತಿ ಮಾಡಿ, ದಾವಣಗೆರೆ ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಆನ್‌ಲೈನ್ ಮುಖಾಂತರ ಶುಲ್ಕ ಪಾವತಿಸಿ ಪ್ರವೇಶಾತಿ ಪಡೆದುಕೊಳ್ಳಬೇಕು. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್: www.ksoumysuru.ac.in ಮೊ. ಸಂ : 8690544544, 8800335638, ಮೊ.ನಂ. 9916009318, 8095939359 ಸಂಪರ್ಕಿಸಲು ಡಾ.ವಿಜಯ್ ಪ್ರಕಾಶ್ ತಿಳಿಸಿದ್ದಾರೆ.

# ಪ್ರಕರಣಗಳ ಶೀಘ್ರ ಇತ್ಯರ್ಥಕ್ಕಾಗಿ ಅದಾಲತ್

» ದಾವಣಗೆರೆ



ಅತೀ ಶೀಘ್ರದಲ್ಲಿ ಮತ್ತು ಕಡಿಮೆ ಖರ್ಚಿನಲ್ಲಿ ಎಲ್ಲರಿಗೂ ನ್ಯಾಯ ಸಿಗಲಿ ಎಂಬುದೇ ಲೋಕ್ ಅದಾಲತ್‌ನ ಉದ್ದೇಶ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ಹೇಳಿದರು.

ದಾವಣಗೆರೆ ಆರ್.ಎಲ್.ಕಾನೂನು ಕಾಲೇಜು, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ನಗರದ ಆರ್.ಎಲ್.ಕಾನೂನು ಕಾಲೇಜು ಆವರದಲ್ಲಿ ಹಮ್ಮಿಕೊಂಡಿದ್ದ ಲೋಕ್ ಅದಾಲತ್ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು.

ವ್ಯಾಜ್ಯಗಳ ಕುರಿತು ಸಣ್ಣ ಪುಟ್ಟ ಮನಸ್ತಾಪಗಳು ಇರುತ್ತವೆ. ಅವುಗಳನ್ನು ಲೋಕ್ ಅದಾಲತ್‌ನಲ್ಲಿ ತೀರ್ಮಾನ ಮಾಡಿಕೊಳ್ಳುವುದರಿಂದ ಪರಸ್ಪರ ಸೌಹಾರ್ಧತೆ ಉಳಿದು ಬಾಂಧವ್ಯ ಬೆಳೆಯುತ್ತದೆ. ಅತೀ ಶೀಘ್ರ ಹಾಗೂ ಅತೀ ಕಡಿಮೆ ಖರ್ಚಿನಲ್ಲಿ ಲೋಕ್ ಅದಾಲತ್‌ನಲ್ಲಿ ತೀರ್ಮಾನ ಮಾಡಿಕೊಳ್ಳಬಹುದಾಗಿದ್ದು, ಈ ಉದ್ದೇಶದಿಂದಲೇ ಲೋಕ್ ಅದಲಾತ್‌ನ್ನು ನಡೆಸಲಾಗುತ್ತದೆ ಎಂದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಎಂ.ಕರಣ್ಣನವರ್ ಮಾತನಾಡಿ, ಪ್ರತಿಯೊಂದುಪ್ರಕರಣಕ್ಕೂನ್ಯಾಯಾಲಯಕ್ಕೆ ಹೋಗಿ ಬಗೆಹರಿಸಿಕೊಳ್ಳುವುದು ಬೇಡ ಎಂಬ ಉದ್ದೇಶದಿಂದ ಲೋಕ್ ಅದಾಲತ್ ನಡೆಸಲಾಗುತ್ತಿದೆ ಎಂದರು.ಭಾರತದ ಸಂವಿಧಾನದಲ್ಲಿ ಎಲ್ಲರಿಗೂ ಸಮಾನವಾದ ನ್ಯಾಯಾ ಸಿಗಬೇಕು ಎಂಬ ಅವಕಾಶ ಇದೆ. ಈ ನಿಟ್ಟಿನಲ್ಲಿ 1987ರಲ್ಲಿ ಕಾನೂನು ಸೇವಾ ಪ್ರಾಧಿಕಾರ ಕಾನೂನನ್ನು ಜಾರಿಗೆ ತರಲಾಗಿದೆ. ಲೋಕ್ ಅದಾಲತ್‌ನಲ್ಲಿ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗುವುದು. ನ್ಯಾಯವನ್ನು ಹರಿಸಿ ಬಂದ ಜನರಿಗೆ ಕಾನೂನಿನ ಅರಿವು ಮತ್ತು ನೆರವನ್ನು ನೀಡುವುದು ಕಾನೂನು ಸೇವಾ ಪ್ರಾಧಿಕಾರದ ಉದ್ದೇಶವಾಗಿದೆ ಎಂದು ಮಾಹಿತಿ ನೀಡಿದರು.ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್ ಕುಮಾರ್ ಮಾತನಾಡಿ, ರಾಜ್ಯದಲ್ಲಿ ಪ್ರಥಮ ಬಾರಿಗೆ ಆರ್.ಎಲ್.ಕಾನೂನು ಕಾಲೇಜು ವಿದ್ಯಾರ್ಥಿಗಳು ಲೋಕ್ ಅದಾಲತ್ ಜಾಗೃತಿ ಜಾಥಾ ಆಯೋಜಿಸಿರುವುದು ಶ್ಲಾಘನೀಯ. ಆ ಮೂಲಕ ವಿದ್ಯಾರ್ಥಿಗಳು ಸಾಮಾಜಿಕ ಅರಿವು ಮೂಡಿಸುವಲ್ಲಿ ಮತ್ತು ಸಾಮಾಜಿಕ ನ್ಯಾಯದ ಅನುಷ್ಠಾನದಲ್ಲಿ ಪಾಲ್ಗೊಂಡಿರುವುದು ಪ್ರಶಂಶನೀಯ ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಯತೀಶ್ ಮಾತನಾಡಿ, ಕಾಲಕಾಲಕ್ಕೆ ಲೋಕ್ ಅದಾಲತ್ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸುತ್ತಿರುವುದು ಕ್ರಾಂತಿಕಾರ ಹೆಜ್ಜೆಯಾಗಿದ್ದು, ಅ ಮೂಲಕ ಸಾಮಾಜಿಕ ಸಾಮರಸ್ಯವನ್ನು ಕಾಪಾಡಬಹುದು. ಗ್ರಾಮಮಟ್ಟದಲ್ಲೂ ಈ ಬಗ್ಗೆ ಅವಶ್ಯಕವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಎಸ್.ಬಸವರಾಜ್, ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಹಿರಿಯ ವಕೀಲರಾದ ಆಂಜನೇಯ ಗುರೂಜಿ, ವಾಗೀಶ್ ಕಟಿಗೆಹಳ್ಳಿ ಮಠ, ಸಹಾಯಕ ಪ್ರಾಧ್ಯಾಪಕರಾದ ವಿದ್ಯಾಧರ ವೇದವರ್ಮ, ಪ್ರದೀಪ್, ಅರ್ಚನಾ, ವ್ಯವಸ್ಥಾಪಕ ಲಿಂಗರಾಜ್, ಸಹಾಯಕ ಲೈಬ್ರೇರಿಯನ್ ಜೈಶಂಕರ್ ಇತರರು ಇದ್ದರು.

## ಜನಪದ ಕಲೆಗಳೇ ಗ್ರಾಮೀಣ ಭಾರತದ ಜೀವಾಳ

» ದಾವಣಗೆರೆ



ಜನಪದ ಕಲೆ ಮತ್ತು ಕಲಾವಿದರು ಗ್ರಾಮೀಣ ಭಾರತದ ತಾಯಿ ಬೇರು ಇದ್ದಂತೆ. ಜನ ಜೀವನ ಮತ್ತು ಉನ್ನತ ಸಾಂಸ್ಕೃತಿಕ ಪರಂಪರೆ ಬಿಂಬಿಸುವ ಜನಪದ ಕಲೆಗಳು ಗ್ರಾಮೀಣ ಭಾರತದ ಜೀವಾಳವಾಗಿವೆ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್ ಅಭಿಪ್ರಾಯಪಟ್ಟರು.

ಶ್ರೀ ಬಸವೇಶ್ವರ ಗ್ರಾಮೀಣ ಸಾಂಸ್ಕೃತಿಕ ಕಲಾ ವೇದಿಕೆ, ಎಲೆಬೇತೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಬಸಾಪುರದ ಆರಾಧ್ಯ ಬಡಾವಣೆಯಲ್ಲಿನ ಶ್ರೀ ರೇವಣಸಿದ್ದೇಶ್ವರ ಪ್ರೌಢಶಾಲೆ ಮತ್ತು ಶ್ರೀಮತಿ ನಾಗಮ್ಮ ಶಾಲೆಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವಿಚಾರ ಗೋಷ್ಠಿ ಮತ್ತು ಬಯಲಾಟ ಪ್ರದರ್ಶನದ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ಆಧುನಿಕತೆಯ ಗಾಢ ಪ್ರಭಾವದಿಂದ ನಮ್ಮ ಶ್ರೀಮಂತ ಜನಪದ ಕಲಾಪ್ರಕಾರಗಳು ನಶಿಸುತ್ತಿವೆ.

ನಮ್ಮ ಜೊತೆ ಬದುಕುತ್ತಿರುವ ಕಲಾವಿದರನ್ನು ಕಡೆಗಣಿಸುವ ಸಂಪ್ರದಾಯ ಬೆಳೆಯುತ್ತಿರುವುದು ನಿಜಕ್ಕೂ ಆತಂಕಕಾರಿ ಬೆಳವಣಿಗೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶ್ರೀರೇವಣಸಿದ್ದೇಶ್ವರ ವಿದ್ಯಾಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಎಂ.ಎಸ್.ನಾಗರಾಜು ಮಾತನಾಡಿ, ಜನಪದ ಪ್ರದರ್ಶನಗಳು ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ನಡೆಯಬೇಕು. ವಿದ್ಯಾರ್ಥಿಗಳಲ್ಲಿ ಈ ಬಗ್ಗೆ ಆಸಕ್ತಿ ಹೆಚ್ಚುವಂತೆ ಅರಿವು ಮೂಡಿಸಬೇಕು. ಅಲ್ಲದೇ ಈ ಕಲೆಗಳ ಬಗ್ಗೆ ಹೆಚ್ಚು ಗೌರವ ಬೆಳೆಯುವಂತೆ ಕಲಾವಿದರಿಗೆ ಪ್ರೋತ್ಸಾಹ ನೀಡಬೇಕಾಗಿದೆ ಎಂದು ತಿಳಿಸಿದರು.

ಕರ್ನಾಟಕ ಬಯಲಾಟ ಅಕಾಡೆಮಿಯ ಮಾಜಿ ಸದಸ್ಯ ಹೆಚ್.ತಿಪ್ಪೇಸ್ವಾಮಿ ಬಯಲಾಟದ ಸಾಹಿತ್ಯ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ರೇವಣಸಿದ್ದೇಶ್ವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿ ಕೆ.ಜಿ.ಸೌಭಾಗ್ಯಮ್ಮ, ವಕೀಲ ಆರ್.ಯೋಗೀಶ್ವರಪ್ಪ, ಹವ್ಯಾಸಿ ಗ್ರಾಮೀಣ ವಿವಿಧ ಕಲಾವಿದರ ಒಕ್ಕೂಟದ ಅಧ್ಯಕ್ಷ ಎನ್.ಎಸ್.ರಾಜು, ಬಸವೇಶ್ವರ ಗ್ರಾಮೀಣ ಕಲಾ ವೇದಿಕೆಯ ಅಧ್ಯಕ್ಷ ಎನ್.ಎ.ವೀರಭದ್ರಯ್ಯ, ಕಾರ್ಯದರ್ಶಿ ನೀರ್ಥಡಿ ಬಸವರಾಜಪ್ಪ, ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಪರಮೇಶ್ವರಪ್ಪ ಸಿರಿಗೆರೆ, ಸಿ.ಹೊನ್ನೂರು ಸ್ವಾಮಿ ಇತರರು ಇದ್ದರು. ಕಾರ್ಯಕ್ರಮದಲ್ಲಿ ಬಯಲಾಟ ಪ್ರದರ್ಶನ, ತೊಗಲು ಬೊಂಬೆಯಾಟ ಪ್ರದರ್ಶನ ನಡೆಯಿತು.

## ಮತ್ತೆ ಆರಂಭವಾದ ಪ್ಲಾಸ್ಟಿಕ್ ದಾಳಿ: ನಗರಸಭೆ ಕಟ್ಟುನಿಟ್ಟಿನ ಎಚ್ಚರಿಕೆ



» ಚಳ್ಳಕೆರೆ

ರಾಜ್ಯ ಸರ್ಕಾರ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇದಿಸಿದ್ದರೂ ಸಹ ನಗರದ ಕೆಲವು ಅಂಗಡಿ, ಮಾರುಕಟ್ಟೆಯಲ್ಲಿ ಪ್ಲಾಸ್ಟಿಕ್ ಕವರ್‌ಗಳ ಬಳಕೆ ನಿಂತ್ರವಾಗಿ ನಡೆಯುತ್ತಿದೆ. ಸಾರ್ವಜನಿಕ ಆಕ್ಷೇಪಣೆ ಮೇರೆಗೆ ಪೌರಾಯುಕ್ತ ರಾಮಕೃಷ್ಣ ಎಫ್. ಸಿದ್ದನಕೊಳ್ಳ ಮಾರ್ಗದರ್ಶನದಲ್ಲಿ ಶುಕ್ರವಾರ ನಗರದ ಕೆಲವೆಡೆ ದಾಳಿ ನಡೆಸಿ ಪ್ಲಾಸ್ಟಿಕ್ ವಸ್ತುಗಳನ್ನು ವಶಪಡಿಸಿಕೊಂಡು ಎಚ್ಚರಿಕೆ ನೀಡಲಾಯಿತು. ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು, ಹಿರಿಯ ಆರೋಗ್ಯ ನಿರೀಕ್ಷಕರಾದ ಮಹಲಿಂಗಪ್ಪ, ದಾದಾಪೀರ್, ಗಣೇಶ್ ಹಾಗೂ ಸಿಬ್ಬಂದಿ ವರ್ಗ ದಾಳಿ ನಡೆಸಿದ್ದು, ಮಹದೇವಿ ರಸ್ತೆಯ ಹಲವಾರು ಅಂಗಡಿಗಳಿಗೆ ಭೇಟಿ ನೀಡಿ ಅಲ್ಲಿದ್ದ ಪ್ಲಾಸ್ಟಿಕ್ ಕವರ್‌ಗಳನ್ನು ವಶಪಡಿಸಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು, ಹಲವಾರು ಬಾರಿ ದಾಳಿ ನಡೆಸಿ ಎಲ್ಲರಿಗೂ ಎಚ್ಚರಿಕೆ ನೀಡಿದರೂ ಸಹ ಪ್ಲಾಸ್ಟಿಕ್ ಕವರ್‌ಗಳ ಮಾರಾಟ ನಡೆಯುತ್ತಿರುವುದು ಕಾನೂನು ಬಾಹಿರ. ಸರ್ಕಾರ ಈಗಾಗಲೇ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದು, ಪ್ರಕರಣ ದಾಖಲಿಸಿಕೊಂಡರೆ ಅಧಿಕ ದಂಡದ ಜೊತೆಗೆ ಶಿಕ್ಷೆಯನ್ನು ಸಹ ವಿಧಿಸಲಾಗುತ್ತದೆ. ಆದ್ದರಿಂದ ಮುಂದಿನ ದಿನಗಳಲ್ಲಿ ಮತ್ತೆ ಇವುಗಳ ಮಾರಾಟ ಕಂಡುಬಂದರೆ ನಿದ್ರಾಕ್ಷಿಣ್ಯ ಕ್ರಮಕೈಗೊಳ್ಳಲಾಗುವುದು ಎಂದರು.

## ಜನರ ಜೀವನಾಡಿಯಾದ ಜಾನಪದ ಕಲೆ, ಸಂಸ್ಕೃತಿ ಉಳಿವಿಗೆ ಎಲ್ಲರೂ ಕೈಜೋಡಿಸಬೇಕು: ಬಿ.ತಿಪ್ಪಣ್ಣ

» ಚಳ್ಳಕೆರೆ



ಸಾಂಸ್ಕೃತಿಕ ಕಾರ್ಯಕ್ರಮಗಳ ಹವ್ಯಾಸದಿಂದ ಸಮಾಜದಲ್ಲಿ ಜಾನಪದ ಕಲೆ ಮತ್ತು ಸಂಸ್ಕೃತಿಯ ಪೋಷಣೆಗೆ ಆಧಾರ ಎಂದು ಹಿರಿಯ ಕತೆಗಾರ ತಿಪ್ಪಣ್ಣ ಮರಿಕುಂಟೆ ಹೇಳಿದರು.

ತಾಲೂಕಿನ ದೇವರಮರಿಕುಂಟೆ ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ಗಿರಿಜನ ವಿದ್ಯಾಸಂಸ್ಥೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರಾದೇಶಿಕ ಕಲೆ ಮತ್ತು ಸಂಸ್ಕೃತಿಯನ್ನು ಸಾಂಸ್ಕೃತಿಕ ನೆಲೆಗಟ್ಟಿನಲ್ಲಿ ಕಾಣುತ್ತೇವೆ. ವಿದ್ಯಾರ್ಥಿಗಳು ಮತ್ತು ಆಸಕ್ತ ಕಲಾವಿದರು ನೆಲಮೂಲದ ಕಲೆಯನ್ನು ಆಸ್ವಾದಿಸುವ ಮತ್ತು ಅಭಿನಯಿಸುವ ಆಸಕ್ತಿ ಬೆಳೆಸಿಕೊಳ್ಳಬೇಕು. ಭಾಷೆ ಮತ್ತು ಕಲೆಯನ್ನು ಸಾಂಸ್ಕೃತಿಕ ಕಲಾವಂತಿಕೆಯಲ್ಲಿ ನಾಡಿನ ವೈಭವತೆ ಮೆರೆಯಬೇಕಿದೆ. ವಿದ್ಯಾರ್ಥಿ ದಿಸೆಯಲ್ಲಿ ಪಠ್ಯೇತರ ಚಟುವಟಿಕೆಗಳ ಆಸಕ್ತಿ ಇರಬೇಕು. ಇದರಿಂದ ಸಮಾಜದ ಜವಾಬ್ದಾರಿ ಮತ್ತು ಕಲಾ ಪರಂಪರೆ ತಿಳಿದುಕೊಳ್ಳಲು ಸಾಧ್ಯ ಎಂದು ಕಿವಿಮಾತು ಹೇಳಿದರು.

ಗ್ರಾಪಂ ಮಾಜಿ ಅಧ್ಯಕ್ಷ ಎಚ್.ಡಿ. ಭೂಲಿಂಗಪ್ಪ ಮಾತನಾಡಿ, ಗ್ರಾಮೀಣ ಜನ ಜೀವನದ ಸಂಸ್ಕೃತಿ ಸಾಹಿತ್ಯ ಮತ್ತು ಜನಪದ ಕತೆಗಳಿಗೆ ಭೂಮಿಕೆ ಇದ್ದಂತೆ. ಹಿರಿಯರ ಕಾಲದಲ್ಲಿ ರಾಮಾಯಣ ಮಹಾಭಾರತ ಕಥಾ ಸಾರವನ್ನು ನಿರರ್ಗಳವಾಗಿ ಹೇಳುವ ಬೌದ್ಧಿಕತೆ ಇತ್ತು. ಅದೇ ರೀತಿ ರಂಗ ಮಂಟಪಗಳಲ್ಲಿ ಪ್ರದರ್ಶನ ಮಾಡುವ ಕಲಾಶ್ರೀಮಂತಿಕೆ ಇತ್ತು. ಬದಲಾದ ಸಮಾಜದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಮರೆಯಾಗುತ್ತಿರುವುದು ವಿಷಾದನೀಯ. ಸುಗ್ಗಿ, ಸಂಭ್ರಮಗಳಲ್ಲಿ ಕಷ್ಟದ ಕೆಲಸಗಳಲ್ಲೂ ಕಲಾ ಚಟುವಟಿಕೆಗಳ ಮೂಲಕ ಖುಷಿಪಡುತ್ತಿದ್ದ ಜನ ಜೀವನ ಈಗ ಇಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳು ವಿವಿಧ ಸಾಂಸ್ಕೃತಿಕಕಾರ್ಯಕ್ರಮಗಳನ್ನುನೆರವೇರಿಸಿದರು. ಗಡಿಭದ್ರತಾ ಪಡೆ ನಿವೃತ್ತ ಅಧಿಕಾರಿ ಡಿ. ರಾಮಲಿಂಗಪ್ಪ ಮತ್ತಿತರರು ಇದ್ದರು.

## ಗ್ರಾ.ಪಂ. ಸದಸ್ಯರು 3 ತಿಂಗಳಲ್ಲಿ ಆಸ್ತಿ ವಿವರ ಸಲ್ಲಿಸುವುದು ಕಡ್ಡಾಯ

» ಮೊದಲ ಪುಟದಿಂದ

ಸದಸ್ಯತ್ವ ಅನರ್ಹಗೊಳಿಸುವ ಮುನ್ನ ಲಲಿತಾಬಾಯಿ ಅವರಿಗೆ ಚುನಾವಣಾ ಆಯೋಗದಿಂದ ಶೋಕಾಸ್ ನೋಟಿಸ್ ಸಹ ನೀಡಲಾಗಿತ್ತು. ತಮ್ಮ ಸದಸ್ಯತ್ವ ಅನರ್ಹತೆ ಕುರಿತು ಹೈಕೋರ್ಟ್ ಮೆಟ್ಟಿಲೇರಿದ್ದ ಲಲಿತಾಬಾಯಿ ಅವರ ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ, ಆಸ್ತಿ ವಿವರ ಸಲ್ಲಿಸಬೇಕಾದದ್ದು ಗ್ರಾಮ ಪಂಚಾಯಿತಿ ಸದಸ್ಯರ ಸಾಂವಿಧಾನಿಕ ಕರ್ತವ್ಯ. ಒಂದು ವೇಳೆ ತಡವಾಗಿ ಆಸ್ತಿ ವಿವರ ಸಲ್ಲಿಸಿದ್ದರೆ ಅಥವಾ ಸಲ್ಲಿಸಿದ ವಿವರಗಳು ಸುಳ್ಳಾಗಿದ್ದ ಸಂದರ್ಭದಲ್ಲಿ ಶೋಕಾಸ್ ನೋಟಿಸ್ ನೀಡಬೇಕಾಗುತ್ತದೆ. ಆದರೆ ಸದಸ್ಯರಾದ ಮೂರು ತಿಂಗಳ ಬಳಿಕವೂ ಆಸ್ತಿ ವಿವರ ಸಲ್ಲಿಸದೆ ಇದ್ದರೆ ಅವರಿಗೆ ಶೋಕಾಸ್ ನೋಟಿಸ್ ನೀಡದೆಯೂ ಅನರ್ಹಗೊಳಿಸಬಹುದು ಎಂದು ಅಭಿಪ್ರಾಯ ಪಟ್ಟಿದೆಯಲ್ಲದೆ ಈ ಪ್ರಕರಣದಲ್ಲಿ ರಾಜ್ಯ ಚುನಾವಣಾ ಆಯೋಗದ ಕ್ರಮ ಸರಿ ಇದೆ ಎಂದು ಹೇಳಿದೆ.

**ಪ್ರಮುಖ ಸುದ್ದಿ**

# ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟಿಸಿದ ಬ್ಲಾಕ್ ಕಾಂಗ್ರೆಸ್ ಘಟಕ: ಬೆಲೆ ಇಳಿಸುವಲ್ಲಿ ಕೇಂದ್ರ ಸರ್ಕಾರ ವಿಫಲ

» ಚಳ್ಳಕೆರೆ

ಕಳೆದ ಕೆಲವಾರು ತಿಂಗಳುಗಳಿಂದ ಪ್ರತಿನಿತ್ಯ ಜನಸಾಮಾನ್ಯರ ಅಗತ್ಯ ವಸ್ತುಗಳು ಹಾಗೂ ಆಹಾರ ಪದಾರ್ಥಗಳ ಬೆಲೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಕೇಂದ್ರ ಸರ್ಕಾರ ನಿರ್ಲಕ್ಷ್ಯತೆಯಿಂದ ಬಡ ಜನರ ಬದುಕು ಬೀದಿಗೆ ಬಂದಿದೆ. ಕೂಡಲೇ ಕೇಂದ್ರ ಸರ್ಕಾರ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ನಿಯಂತ್ರಿಸಬೇಕೆಂದು ತಾಲ್ಲೂಕು ಕಾಂಗ್ರೆಸ್ ಪಕ್ಷ ಪ್ರತಿಭಟನೆ ನಡೆಸಿದರು.

ನಗರದ ವಾಲ್ಮೀಕಿ ವೃತ್ತದಲ್ಲಿ ಶುಕ್ರವಾರ ಮಧ್ಯಾಹ್ನ ಬ್ಲಾಕ್ ಘಟಕದ ಅಧ್ಯಕ್ಷ ಕೆ.ವೀರಭದ್ರಪ್ಪ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಘಟಕದ ಅಧ್ಯಕ್ಷ ಜೆ.ಟಿ.ಶಶಿಧರ ಹಾಗೂ ಮಹಿಳಾ ಘಟಕದ ಪದಾಧಿಕಾರಿಗಳ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ಕೇಂದ್ರ ಸರ್ಕಾರ ಬೆಲೆ ಏರಿಕೆಯನ್ನು ನಿಯಂತ್ರಿಸುವಲ್ಲಿ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳುತ್ತಿಲ್ಲ. ಪ್ರತಿಯೊಂದು ವಸ್ತುವಿನ ಬೆಲೆ ದುಪ್ಪಟ್ಟಾಗಿದೆ. ವಿಶೇಷವಾಗಿ ಪ್ರತಿನಿತ್ಯ ಉಪಯೋಗಿಸುವ ಆಹಾರ ಪದಾರ್ಥ, ದಿನಸಿ ವಸ್ತುಗಳು ಹಾಗೂ ತರಕಾರಿ ಬೆಲೆಗಳೂ ಸಹ ಗಗನಕ್ಕೇರಿದ್ದು, ಬೆಲೆಗಳ ನಿಯಂತ್ರಣದಲ್ಲಿ ಕೇಂದ್ರ ಸರ್ಕಾರ ಕೈಕಟ್ಟಿ ಕುಳಿತಿರುವುದು ನೋವಿನ ಸಂಗತಿ ಎಂದು ಪ್ರತಿಭಟನಕಾರರು ಆರೋಪಿಸಿದರು.

ಪ್ರತಿಭಟನೆಯಲ್ಲಿ ನಗರಸಭಾ ಸದಸ್ಯ ವಿರೂಪಾಕ್ಷ, ಮುಖಂಡರಾದ ಸಿ.ಟಿ.ಶ್ರೀನಿವಾಸ್, ಡಿ.ಕೆ.ಕಾಟಯ್ಯ, ಪ್ರಕಾಶ್, ಅನ್ವರ್ ಮಾಸ್ಟರ್, ಆರ್.ಪ್ರಸನ್ನಕುಮಾರ್, ಚೌಳೂರು ಪ್ರಕಾಶ್, ರುದ್ರಮುನಿ, ಲಕ್ಷ್ಮೀದೇವಿ, ಬಿ.ಎಂ.ಭಾಗ್ಯಮ್ಮ, ಪಾತಲಿಂಗಪ್ಪ, ಭಾಗ್ಯಲಕ್ಷ್ಮಿ, ನಾಗರಾಜ ಸಿರಿಗೊಂಡಪ್ಪ, ಉಷಾ, ಸೈಪುಲ್ಲಾ, ಭೀಮಣ್ಣ, ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ಬ್ಲಾಕ್ ಕಾಂಗ್ರೆಸ್ ವತಿಯಿಂದ ಕೇಂದ್ರ ಸರ್ಕಾರ ಬೆಲೆ ಏರಿಕೆಯನ್ನು ವಿರೋಧಿಸಿ ಪ್ರತಿಭಟನೆ ನಡೆಸಿದರು.

## ಫಾಸ್ಟ್ ನ್ಯೂಸ್

### ಎಸ್‌ಸಿಪಿ/ಟಿಎಸ್‌ಪಿ ಸಮಿತಿ ಸಭೆ

» ದಾವಣಗೆರೆ

ವಿವಿಧ ಇಲಾಖೆಗಳಿಂದ ಪ.ಜಾ ಉಪಯೋಜನೆ, ಬುಡಕಟ್ಟುಉಪಯೋಜನೆಯಡಿಅನುಷ್ಠಾನಗೊಳಿಸುತ್ತಿರುವ ಅಭಿವೃದ್ಧಿ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯನ್ನು ಜುಲೈ 13 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ನಾಗರಾಜ್ .ಕೆ ತಿಳಿಸಿದ್ದಾರೆ.

### 15ಕ್ಕೆ ದಿಶಾ ಸಮಿತಿ ಸಭೆ

» ದಾವಣಗೆರೆ

ಲೋಕಸಭಾ ಸದಸ್ಯರಾದ ಡಾ.ಜಿ.ಎಂ ಸಿದ್ದೇಶ್ವರ ಅವರ ಅಧ್ಯಕ್ಷತೆಯಲ್ಲಿ ಜುಲೈ 15 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಎಸ್ ಎಸ್ ಮಲ್ಲಿಕಾರ್ಜುನ್ ಸಭಾಂಗಣದಲ್ಲಿ ದಿಶಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ತಿಳಿಸಿದ್ದಾರೆ.

### ಜೋಗ-ಶಿರಸಿ ಕೆಎಸ್‌ಆರ್‌ಟಿಸಿ ಬಸ್

» ದಾವಣಗೆರೆ

ದಾವಣಗೆರೆ ಹಾಗೂ ಹರಿಹರರಿಂದ ಜೋಗ ಮತ್ತು ಶಿರಸಿಗೆ ಜುಲೈ 16 ರಿಂದ ಪ್ರತಿ ಭಾನುವಾರಗಳಂದು ಪ್ರಯಾಣಿಕರಿಗೆ ವಿಶೇಷ ಪ್ಯಾಕೇಜ್ ಸಾರಿಗೆ ವ್ಯವಸ್ಥೆಯಡಿ ಸೌಲಭ್ಯ ಕಲ್ಪಿಸಲಾಗಿದೆ.ಬೆಳಿಗ್ಗೆ 7 ಗಂಟೆಗೆ ದಾವಣಗೆರೆಯಿಂದ ಹೊರಟು 10.30 ಕ್ಕೆ ಶಿರಸಿ, ಮಧ್ಯಾಹ್ನ 12 ಗಂಟೆಗೆ ಶಿರಸಿಯಿಂದ ಹೊರಟು 1.30 ಕ್ಕೆ ಜೋಗ, ಸಂಜೆ 4.30 ಕ್ಕೆ ಜೋಗದಿಂದ ಹೊರಟು ರಾತ್ರಿ 8 ಗಂಟೆಗೆ ದಾವಣಗೆರೆ ತಲುಪುವುದು.

ಎರಡೂ ಕಡೆ ಸೇರಿ ನೇರ ಪ್ರಯಾಣಿಕರಿಗೆ ರೂ.600 ಮತ್ತು ಮಕ್ಕಳಿಗೆ ರೂ.450 ಪ್ರಯಾಣ ದರ ಹಾಗೂ ಹರಿಹರದಿಂದ ಬೆಳಿಗ್ಗೆ 7.30 ಗಂಟೆಗೆ ಹೊರಟು 10.30 ಕ್ಕೆ ಶಿರಸಿ, ಮಧ್ಯಾಹ್ನ 12 ಗಂಟೆಗೆ ಶಿರಸಿಯಿಂದ ಹೊರಟು 1.30 ಕ್ಕೆ ಜೋಗ, ಸಂಜೆ 4.30 ಕ್ಕೆ ಜೋಗದಿಂದ ಹೊರಟು ರಾತ್ರಿ 7.30 ಗಂಟೆಗೆ ದಾವಣಗೆರೆ ತಲುಪುವುದು.

ಎರಡೂ ಕಡೆ ಸೇರಿ ನೇರ ಪ್ರಯಾಣಿಕರಿಗೆ ರೂ.575 ಮತ್ತು ಮಕ್ಕಳಿಗೆ ರೂ.430 ಪ್ರಯಾಣ ದರ ಇರುತ್ತದೆ.ಮುಂಗಡ ಬುಕ್ಕಿಂಗ್ ಮಾಡಲು ಬುಕ್ಕಿಂಗ್ ಕೌಂಟರ್ ನಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ಕರಾರಸಾ ನಿಗಮದ ದಾವಣಗೆರೆ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

### ಲೋಕಾಯುಕ್ತ ಪೋಲೀಸ್ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ದಾವಣಗೆರೆ

ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಜುಲೈ 12 ರಂದು ದಾವಣಗೆರೆ ನಗರದ ಪ್ರವಾಸಿ ಮಂದಿರದಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಸಾರ್ವಜನಿಕರು ತಮ್ಮ ದೂರು ಹಾಗೂ ಅಹವಾಲುಗಳನ್ನು ಸಲ್ಲಿಸಬಹುದು. ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇದ್ದರೆ ಅಂತಹ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್.ಕೌಲಾಪೂರೆ ತಿಳಿಸಿದ್ದಾರೆ.

### ಬಿಡಾಡಿ ಹಂದಿಗಳ ಮಾಲೀಕರ ಗಮನಕ್ಕೆ

» ದಾವಣಗೆರೆ

ಮಹಾನಗರ ಪಾಲಿಕೆ ವತಿಯಿಂದ ನಗರದಲ್ಲಿರುವ ಬಿಡಾಡಿ ಹಂದಿ ಮಾಲಿಕರಿಗೆ ಪರ್ಯಾಯವಾಗಿ ಹಂದಿ ಸಾಗಾಣಿಕೆಗೆ ವ್ಯವಸ್ಥೆ ಕಲ್ಪಿಸುವ ಸಲುವಾಗಿ ಜುಲೈ 15 ರಂದು ಸಂಜೆ 5 ಗಂಟೆಗೆ ಮಹಾನಗರ ಪಾಲಿಕೆಯ ಆರೋಗ್ಯ ಶಾಖೆ ಕಚೇರಿಯಲ್ಲಿ ಸಮೀಕ್ಷೆ ಕೈಗೊಳ್ಳಲಾಗಿದೆ. ಆಧಾರ್ ಕಾರ್ಡ್/ಬಿ.ಪಿ.ಎಲ್/ಪಾನ್/ಚುನಾವಣಾ ಗುರುತಿನ ಚೀಟಿ ಮತ್ತು ಜಾತಿ ಪ್ರಮಾಣ ಪತ್ರದೊಂದಿಗೆ ನಿಗದಿತ ಸ್ಥಳ ಮತ್ತು ಸಮಯಕ್ಕೆ ಹಾಜರಾಗಿ ಕಚೇರಿಯಲ್ಲಿ ಅರ್ಜಿ ನಮೂನೆ ಪಡೆದು ಸಲ್ಲಿಸಬೇಕು ಎಂದು ಮಹಾನಗರಪಾಲಿಕೆ ಆಯುಕ್ತರಾದ ಶ್ರೀಮತಿ ರೇಣುಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೆಸ್ಕಾಂ ಜನ ಸಂಪರ್ಕ ಸಭೆ

» ಶಿವಮೊಗ್ಗ

ಮೆಸ್ಕಾಂ ತೀರ್ಥಹಳ್ಳಿ ಉಪವಿಭಾಗ ಕಛೇರಿಯಲ್ಲಿ ಜುಲೈ -11 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ರವರೆಗೆ ಜನ ಸಂಪರ್ಕ ಸಭೆ ನಡೆಯಲ್ಲಿದ್ದು, ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದಾರೆ. ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ದಾವಣಗೆರೆ ಅಭಿವೃದ್ಧಿ ಪಥದಲ್ಲಿ ಹಿಮ್ಮುಖ

## ಶಿಕ್ಷಣ, ಆರೋಗ್ಯ, ವಸತಿ ಮತ್ತು ನೀರಾವರಿ ಸೌಲಭ್ಯಗಳ ಹೆಚ್ಚಿಸಲು ಅಧಿಕಾರಿಗಳು ಒತ್ತುಕೊಟ್ಟು ಕೆಲಸ ಮಾಡಿ

» ದಾವಣಗೆರೆ

ದಾವಣಗೆರೆ ಜಿಲ್ಲೆ ರಾಜ್ಯದ ಇತರೆ ಜಿಲ್ಲೆಗಳಿಗಿಂತ ಅಭಿವೃದ್ಧಿ ಪಥದಲ್ಲಿ ಸದಾ ಮುನ್ನೆಡೆಯುತ್ತಿತ್ತು, ಆದರೆ ಅಭಿವೃದ್ಧಿ ಪಥದಿಂದ ಹಿಮ್ಮುಖವಾಗಿದ್ದು ಜಿಲ್ಲೆಯಲ್ಲಿ ಶಿಕ್ಷಣ, ಆರೋಗ್ಯ ಸುಧಾರಣೆ ಸೇರಿದಂತೆ ವಸತಿ ಸೌಲಭ್ಯ ಮತ್ತು ನೀರಾವರಿ ಸೌಕರ್ಯವನ್ನು ಹೆಚ್ಚಿಸುವ ಮೂಲಕ ಜಿಲ್ಲೆಯನ್ನು ಅಭಿವೃದ್ಧಿ ಪಥದ ಪ್ರಥಮ ಸ್ಥಾನಕ್ಕೆ ಕೊಂಡೊಯ್ಯಲು ಅಧಿಕಾರಿಗಳು ಶ್ರಮವಹಿಸಬೇಕೆಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಜುಲೈ 8 ಶನಿವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪ್ರಸಕ್ತ ಸಾಲಿನ ಮೊದಲ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಳೆದ 5 ವರ್ಷಗಳ ಹಿಂದೆ ಅನೇಕ ಕ್ಷೇತ್ರದಲ್ಲಿ ಜಿಲ್ಲೆ ರಾಜ್ಯದ ಇತರೆ ಜಿಲ್ಲೆಗಳಿಗಿಂತ ಮುಂದೆ ಇರುತ್ತಿತ್ತು. ಆಡಳಿತದ ಬದಲಾವಣೆಯಿಂದ ಜಿಲ್ಲೆ ಅಭಿವೃದ್ಧಿಯಿಂದ ಹಿನ್ನಡೆಯಾಗಿದೆ. ಈ ನಿಟ್ಟಿನಲ್ಲಿ ಎಲ್ಲಾ ಇಲಾಖೆ ಅಧಿಕಾರಿಗಳು ಜಿಲ್ಲೆಯ ಅಭಿವೃದ್ದಿಗೆ ಶ್ರಮಿಸಬೇಕಾಗಿದೆ. ಸರ್ಕಾರದ ಮಟ್ಟದಲ್ಲಿ ಜಿಲ್ಲೆಗೆ ಸಂಬಂಧಿಸಿದ ಕೆಲಸಗಳಿದ್ದಲ್ಲಿ ಅದನ್ನು ಬಗೆಹರಿಸಿಕೊಡಲಾಗುತ್ತದೆ ಎಂದರು.

ಭ್ರಷ್ಟಾಚಾರ ಮುಕ್ತ ಆಡಳಿತ; ಯಾವುದೇ ಇಲಾಖೆ ಅಧಿಕಾರಿಗಳು ಕೆಲಸ ಮಾಡುವುದರಲ್ಲಿ ಭ್ರಷ್ಟಾಚಾರ ಮುಕ್ತರಾಗಿರಬೇಕು. ಸರ್ಕಾರದ ಗ್ಯಾರಂಟಿ ಯೋಜನೆಗಳು ಜನಪರವಾದ ಯೋಜನೆಗಳಾಗಿದ್ದು ಆಯವ್ಯಯದಲ್ಲಿ ಎಲ್ಲಾ ಐದು ಯೋಜನೆಗಳಿಗೆ ಅವಕಾಶ ಮಾಡಿಕೊಡಲಾಗಿದೆ. ಈ ಎಲ್ಲಾ ಯೋಜನೆಗಳನ್ನು ಕಾರ್ಯರೂಪಕ್ಕೆ ತರಬೇಕಾಗಿದೆ. ಮತ್ತು ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಅನುಷ್ಠಾನ ಮಾಡಬೇಕಾಗಿದ್ದು ವಿಶೇಷವಾಗಿ ಇನ್ನೂ ಹಲವಾರು ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುತ್ತದೆ. ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವಾಗ ಭ್ರಷ್ಟಾಚಾರವನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.




ಜನರ ಆರೋಗ್ಯ ಕಾಪಾಡಿ; ಕೊರೋನಾ ಸಂದರ್ಭದಲ್ಲಿ ಜನರ ಜೀವಗಳೊಂದಿಗೆ ಚೆಲ್ಲಾಟವಾಡಿದ್ದು ಎಲ್ಲರಿಗೂ ಗೊತ್ತಿರುವ ವಿಷಯವಾಗಿದೆ. ಆದರೆ ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಇಲಾಖೆ ಹೆಚ್ಚಿನ ಜವಾಬ್ದಾರಿಯನ್ನು ವಹಿಸಬೇಕಾಗಿದೆ. ಜನರಿಗೆ ಆರೋಗ್ಯ ಸುರಕ್ಷತೆಗೆ ನೀಡಲಾಗಿರುವ ಎಬಿಆರ್‌ಕೆ ಕಾರ್ಡ್ ವಿತರಣೆ, ಹೆಚ್ಚಿನ ಚಿಕಿತ್ಸೆ ಅಗತ್ಯವಿರುವವರಿಗೆ ರೆಫರಲ್ ಸಕಾಲದಲ್ಲಿ ನೀಡಬೇಕು. ಅಂಬುಲೆನ್ಸ್ ಸೇವೆ ಅಗತ್ಯವಿರುವವರಿಗೆ ಸಿಗುವಂತಿರಬೇಕು. ಸಿ.ಜಿ. ಆಸ್ಪತ್ರೆಯಲ್ಲಿ ಎಂ.ಆರ್.ಐ.ಸ್ಕ್ಯಾನಿಂಗ್ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಲು ಸೂಚನೆ ನೀಡಿ ದಿನದ 24 ಗಂಟೆ ಕಾರ್ಯನಿರ್ವಹಿಸುವ ಗ್ರಾಮಾಂತರ ಪ್ರದೇಶದ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಕರ್ತವ್ಯ ನಿರತರಾಗಿರುವಂತೆ ನೋಡಿಕೊಳ್ಳಲು ಸೂಚನೆ ನೀಡಿದರು.

ಈ ವೇಳೆ ಚನ್ನಗಿರಿ ಶಾಸಕರಾದ ಬಸವರಾಜ್ ವಿ.ಶಿವಗಂಗ ಅವರು ಮಾತನಾಡಿ ಸರ್ಕಾರಿ ಆಸ್ಪತ್ರೆಗಳಲ್ಲಿ ಚೀಟಿ ಬರೆಯುವ ಪದ್ದತಿ ಇದೆ. ಇತ್ತೀಚೆಗೆ ಸಂತೆಬೆನ್ನೂರಿಗೆ ಭೇಟಿ ನೀಡಿದ ವೇಳೆ ಚಿಕಿತ್ಸೆಗೆ ಬಂದವರಿಗೆ ಚೀಟಿ ಬರೆದು ಹೊರಗೆ ಔಷಧ ತರಲು ತಿಳಿಸಿರುವುದನ್ನು ನೋಡಲಾಗಿದೆ. ಈ ರೀತಿ ಆಗದಂತೆ ನೋಡಿಕೊಂಡುಅಗತ್ಯವಿರುವಔಷಧವನ್ನು ಸರ್ಕಾರದಿಂದಲೇ ಖರೀದಿಸಲು ಶಾಸಕರು ತಿಳಿಸಿದರು.

ಡಯಾಲೀಸಿಸ್ ಕೇಂದ್ರಗಳ ಹೆಚ್ಚಳ; ಈ ಭಾರಿಯ ಬಜೆಟ್‌ನಲ್ಲಿ ಹೊನ್ನಾಳಿ ಸೇರಿದಂತೆ ಎಲ್ಲಾ ತಾಲ್ಲೂಕುಗಳಲ್ಲಿ ಡಯಾಲೀಸಿಸ್ ಘಟಕಗಳನ್ನು ಸ್ಥಾಪನೆ ಮಾಡಲಾಗುತ್ತದೆ. ಸಿಜಿ ಆಸ್ಪತ್ರೆಯಲ್ಲಿರುವ ಡಯಾಲೀಸಿಸ್ ಘಟಕದಲ್ಲಿ ಸರಿಯಾಗಿ ನಿರ್ವಹಣೆ ಮಾಡಲಾಗುತ್ತಿಲ್ಲ ಎಂಬ ದೂರುಗಳಿದ್ದು ಇದನ್ನು ಸರಿಪಡಿಸಲು ಜಿಲ್ಲಾ ಸರ್ಜನ್‌ಗೆ ಸೂಚನೆ ನೀಡಿದರು.

ಇದೇವೇಳೆಮಾಯಕೊಂಡಶಾಸಕರಾದ ಕೆ.ಎಸ್.ಬಸವಂತಪ್ಪ ಮಾತನಾಡಿ ಸರ್ಕಾರದ ಅಂಬುಲೆನ್ಸ್ ಇದ್ದರೂ ಸಹ ಖಾಸಗಿ ಹಾವಳಿಯಿಂದ ಬಡವರಿಗೆ ಅಂಬುಲೆನ್ಸ್ ಸೇವೆ ದುಬಾರಿಯಾಗಿದೆ. ಸರ್ಕಾರದ ಅಂಬುಲೆನ್ಸ್ ಇದ್ದಲ್ಲಿ ಬಡವರಿಗೆ ಅನುಕೂಲವಾಗಲಿದೆ. ಸಿಜೆ ಆಸ್ಪತ್ರೆ ಅಂಬುಲೆನ್ಸ್ ಇದ್ದರೂ ಸಕಾಲದಲ್ಲಿ ಸಿಗುವುದಿಲ್ಲ. ಆದರೆ ಅಲ್ಲಿಯವರೇ ಖಾಸಗಿ ಅಂಬುಲೆನ್ಸ್ ಪಡೆಯಲು ಹೇಳುತ್ತಾರೆ, ಇದು ಬಡವರಿಗೆ ಆರ್ಥಿಕವಾಗಿ ಬಹಳ ಹೊರೆಯಾಗಲಿದ್ದು 10 ರಿಂದ 16 ಸಾವಿರದ ವರೆಗೆ ವೆಚ್ಚ ಬರಲಿದೆ. ಮತ್ತು ಮರಣ ಹೊಂದಿದಾಗ ತೆಗೆದುಕೊಂಡು ಹೋಗಲು ಸಹ ಯಾವುದೇ ಅಂಬುಲೆನ್ಸ್ ಇಲ್ಲ, ನಾನೇ ರೂ.3 ಲಕ್ಷ ಕೊಟ್ಟು ರಿಪೇರಿ ಮಾಡಿಸಿದ್ದರೂ ಉಪಯೋಗಕ್ಕೆ ಬಾರದಂತಾಗಿದೆ. ಇದಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಮನವಿ ಮಾಡಿದ ಶಾಸಕರು ಸಿಜೆ ಆಸ್ಪತ್ರೆ ಆವರಣದಲ್ಲಿ ಖಾಸಗಿ ಅಂಬುಲೆನ್ಸ್‌ಗಳನ್ನು ಬೇರೆಡೆಗೆ ಸ್ಥಳಾಂತರಿಸಬೇಕೆಂದರು.

ಕೃಷಿ ಅಧಿಕಾರಿಗಳ ಕ್ಷೇತ್ರ ಭೇಟಿಗೆ ಸೂಚನೆ; ಕೃಷಿ ಇಲಾಖೆ ಅಧಿಕಾರಿಗಳು ಕೇವಲ ಬಿತ್ತನೆ ಬೀಜ, ರಸಗೊಬ್ಬರ, ಸಬ್ಸಿಡಿ ನೀಡುವುದಲ್ಲ, ಅಧಿಕಾರಿಗಳು ರೈತರ ತಾಕುಗಳಿಗೆ ಭೇಟಿ ನೀಡಿ ಅವರು ಬೆಳೆದ ಬೆಳೆಗಳನ್ನು ವೀಕ್ಷಣೆ ಮಾಡಿ ಅವರಿಗೆ ಅಗತ್ಯವಿರುವ ತಾಂತ್ರಿಕ ಸಲಹೆಯನ್ನು ಕ್ಷೇತ್ರ ಮಟ್ಟದಲ್ಲಿ ನೀಡಬೇಕು. ಕೃಷಿ ಅಧಿಕಾರಿಗಳು ರೈತರ ಬಳಿ ತೆರಳಿ ಯಾವ ಬೆಳೆ ಬೆಳೆಯುತ್ತಿದ್ದಾರೆ, ಅವರು ಉಪಯೋಗಿಸುವ ಗೊಬ್ಬರ, ಬಿತ್ತನೆ ಬೀಜಗಳ ಮಾಹಿತಿಯನ್ನು ನೀಡಬೇಕು. ಮತ್ತು ಹೊಸ ಹೊಸ ತಾಂತ್ರಿಕತೆಯನ್ನು ರೈತರಿಗೆ ಪರಿಚಯಿಸುವ ಕೆಲಸವನ್ನು ಮಾಡಲು ತಿಳಿಸಿ ಜಿಲ್ಲೆಗೆ ಅಗತ್ಯವಿರುವ ಬಿತ್ತನೆ ಬೀಜ ಮತ್ತು ಗೊಬ್ಬರದ ದಾಸ್ತಾನು ಇಟ್ಟುಕೊಂಡು ಕಳಪೆ ಬಿತ್ತನೆ ಬೀಜ ಮಾರಾಟವಾಗದಂತೆ ನೋಡಿಕೊಳ್ಳಬೇಕೆಂದು ಸೂಚನೆ ನೀಡಿದರು.

ರಾಗಿ ಖರೀದಿ ಹಣ ನೀಡಲು ರೂ.8 ಕೋಟಿ; ಬೆಂಬಲ ಬೆಲೆಯಲ್ಲಿ ಜಗಳೂರು ಕೇಂದ್ರದಲ್ಲಿ ರಾಗಿ ಖರೀದಿಸಿದ ರೈತರಿಗೆ ಹಣ ನೀಡಲು ಸರ್ಕಾರದಿಂದ ರೂ.8 ಕೋಟಿ ಬಿಡುಗಡೆಯಾಗಿದೆ. ಇಲ್ಲಿ ರಾಗಿ ಖರೀದಿ ವೇಳೆ ಅಕ್ರಮವೆಸಗಲಾಗಿದೆ ಎಂದು ದೂರಿನ ಹಿನ್ನಲೆಯಲ್ಲಿ 489 ರೈತರ ವಿವರವನ್ನು ಮರುಪರಿಶೀಲಿಸಲು ನಿರ್ದೇಶಿಸಲಾಗಿದ್ದು ಪರಿಶೀಲಿಸಿ ಹಣ ಪಾವತಿಗೆ ಕ್ರಮ ವಹಿಸಲಾಗುತ್ತದೆ ಎಂದು ಆಹಾರ ಇಲಾಖೆ ಅಧಿಕಾರಿಗಳು ಸಚಿವರಿಗೆ ತಿಳಿಸಿದರು. ಈ ವೇಳೆ ಜಗಳೂರು ಶಾಸಕರಾದ ದೇವೇಂದ್ರಪ್ಪನವರು ಮುಖ್ಯಮಂತ್ರಿಗಳು ಹಾಗೂ ಆಹಾರ ಸಚಿವರು ಹಣ ಬಿಡುಗಡೆಗೆ ಆದೇಶಿಸಿದ್ದಾರೆ. ಖರೀದಿ ಕೇಂದ್ರದಲ್ಲಿ ಅಕ್ರಮವೆಸಗಿದ ಅಧಿಕಾರಿಗಳು, ಮಧ್ಯಸ್ಥರ ಮೇಲೆ ಕ್ರಮ ಕೈಗೊಳ್ಳಬೇಕು. 7 ಸಾವಿರ ರೈತರಿದ್ದಾರೆ ಆದರೆ 13 ಸಾವಿರ ರೈತರ ಪಹಣಿಯಲ್ಲಿ ರಾಗಿ ಬೆಳೆದಿದ್ದಾರೆ ಎಂಬ ಅಂಕಿ ಅಂಶಗಳಿವೆ. ಈ ಪ್ರಕರಣದಿಂದ ಮುಂದಿನ ದಿನಗಳಲ್ಲಿ ರೈತರಿಗೆ ಅನ್ಯಾಯವಾಗಬಾರದು. ಆದ್ದರಿಂದ ತಪ್ಪಿತಸ್ಥರಿಗೆ ತಕ್ಕ ಶಿಕ್ಷೆ ಮತ್ತು ರೈತರಿಗೆ ನ್ಯಾಯ ಸಿಗಬೇಕೆಂದರು.

ಸಭೆಯಲ್ಲಿ ಹರಿಹರ ಶಾಸಕರಾದ ಬಿ.ಪಿ.ಹರೀಶ್, ವಿಧಾನ ಪರಿಷತ್ ಸದಸ್ಯರಾದ ಕೆ.ಅಬ್ದುಲ್ ಜಬ್ಬಾರ್, ಜಿಲ್ಲಾಧಿಕಾರಿ ಶಿವಾನಂದ ಕಾಪಶಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಡಾ; ಅರುಣ್.ಕೆ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಗುರು ಪ್ರೇರಣೆಯಿಂದ ಮಾತ್ರ ಸಾಧನೆಯತ್ತ ಹೆಜ್ಜೆ



» ಚಳ್ಳಕೆರೆ

ವಿಶ್ವದ ಇತಿಹಾಸದಲ್ಲಿಯೇ ಸಂಸ್ಕೃತಿ ಮತ್ತು ಸಂಸ್ಕಾರವನ್ನು ರೂಢಿಸಿಕೊಂಡು ಗುರುಪರಂಪರೆಯನ್ನು ರೂಢಿಸಿಕೊಂಡು ಬಂದಿರುವ ಏಕೈಕ ದೇಶ ಭಾರತ. ಪಾಶ್ಚಾತ್ಯ ರಾಷ್ಟ್ರಗಳಲ್ಲಿ ಗುರುವಿನ ಬಗ್ಗೆ ಕಲ್ಪನೆಯೇ ಕಡಿಮೆ. ಆದರೆ, ನಮ್ಮಲ್ಲಿ ಮಾತ್ರ ನಮಗೆ ಜ್ಞಾನದ ಸ್ಪರ್ಶ ನೀಡಿ, ಉತ್ತಮ ಬದುಕಿನತ್ತ ಹೆಜ್ಜೆ ಇಡಲು ಪ್ರೇರಣೆ ನೀಡಿದ ಶಕ್ತಿ ಎಂದರೆ ಗುರುಗಳು. ಆದ್ದರಿಂದ ಗುರುಪರಂಪರೆ ಇಂದಿಗೂ ತನ್ನದೇಯಾದ ಮೌಲ್ಯ ಕಾಪಾಡಿಕೊಂಡು ಬಂದಿದೆ ಎಂದು ಶಿವಮೊಗ್ಗ ರಾಮಕೃಷ್ಣ ವಿವೇಕಾನಂದ ಆಶ್ರಮದ ವಿನಯಾನಂದಜೀ ತಿಳಿಸಿದರು.

ಅವರು, ನಗರದ ಶಾರದಾಶ್ರಮದಲ್ಲಿ ಹಮ್ಮಿಕೊಂಡಿದ್ದ ಗುರುಪೌರ್ಣಿಮೆ ಮತ್ತು ಶ್ರೀಮದ್ ಭಾಗವತ ಸಪ್ತಾಹ ಕಾರ್ಯಕ್ರಮದಲ್ಲಿ ಭಾಗವಹಿಸಿಮಾತನಾಡಿದರು.ಗುರುಪರಂಪರೆಯ ವೈಶಿಷ್ಟ್ಯತೆಯಿಂದ ಮಾತ್ರ ನಾವು ನಮ್ಮ ಬದುಕನ್ನು ಉತ್ತಮ ಪಡಿಸಿಕೊಳ್ಳಲು ಸಾಧ್ಯ. ಆಧ್ಯಾತ್ಮಿಕ ವಿಚಾರಗಳು, ಧಾರ್ಮಿಕ ಕಾರ್ಯಕ್ರಮ, ದೇವರ ಬಗ್ಗೆ ಇರುವ ಅಪಾರವಾಧ ಭಕ್ತಿ, ಶ್ರದ್ದೆ, ವಿನಯ, ಸದಾಕಾಲ ನಮ್ಮನ್ನು ಆವರಿಸಿಕೊಂಡಿರುತ್ತದೆ. ಹಾಗಾಗಿ ನಾವು ಯಾವಾಗಲೂ ಉತ್ತಮ ವಿಚಾರಗಳತ್ತ ಮಾತ್ರ ಗಮನಹರಿಸಲು ಸಾಧ್ಯ. ಯಾವ ವ್ಯಕ್ತಿ ದೈವ ಮತ್ತು ಗುರುಗಳ ಆರಾಧನೆ ಮಾಡುತ್ತಾನೋ ಅವನು ಮಾತ್ರ ಉತ್ತಮ ಸನ್ಮಾರ್ಗವನ್ನು ಕಂಡುಕೊಳ್ಳುತ್ತಾನೆ. ನಾವೆಲ್ಲರೂ ನಮ್ಮ ಬದುಕಿನ ಆದರ್ಶಗಳನ್ನು ಗುರುಪರಂಪರೆಯ ಆಧಾರದಿಂದಲೇ ರೂಢಿಸಿಕೊಳ್ಳಲು ಸಾಧ್ಯವೆಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾರದಾಶ್ರಮದ ಮಾತಾಜಿ ತ್ಯಾಗಮಯಿ ಮಾತನಾಡಿ, ಗುರುಪೌರ್ಣಿಮೆ ಕಾರ್ಯಕ್ರಮ ನಮ್ಮೆಲ್ಲರಿಗೂ ಹೆಚ್ಚು ಶಕ್ತಿ ಮತ್ತು ಚೈತನ್ಯ ನೀಡುತ್ತದೆ. ಗುರು ಎಂಬ ಎರಡು ಅಕ್ಷರದಲ್ಲಿ ಎಲ್ಲಾ ದೈವತ್ವ ಗುಣಗಳು ಅಡಗಿವೆ. ಹಾಗಾಗಿ ಗುರುವಿಗೆ ವಿಶೇಷ ಸ್ಥಾನವನ್ನು ನಾವು ನೀಡುತ್ತಾ ಬಂದಿದ್ದೇವೆ. ಗುರುವಿನ ಅರಿವು ಭಗವಂತನ ಒಲವು ಇಲ್ಲದಿದ್ದರೆ ನಮ್ಮ ಬದುಕು ಶೂನ್ಯವಾಗುತ್ತದೆ ಎಂದರು.

# ಚನ್ನಸಮುದ್ರ ಸಮೀಪ ಬೋನಿನಲ್ಲಿ ಕರಡಿ ಸೆರೆ: ಕರಡಿ ಸೆರೆಗೆ ಕಾರ್ಯಚರಣೆ



» ಹೊಸದುರ್ಗ

ತಾಲ್ಲೂಕಿನ ಚನ್ನಸಮುದ್ರ (ಪುರ) ರಸ್ತೆಯ ಗುಡ್ಡದ ಸಮೀಪ ಶನಿವಾರ ನಸುಕಿನಲ್ಲಿ ಕರಡಿಯೊಂದು ಬೋನ್ ಗೆ ಬಿದ್ದಿದೆ. ನಾಲ್ಕು ಕರಡಿಗಳಲ್ಲಿ ಎರಡು ಕರಡಿ ಸೆರೆಯಾಗಿದ್ದು, ಮತ್ತೆರಡು ಕರಡಿ ಸೆರೆಗೆ ಶೋಧ ಕಾರ್ಯ ನಡೆಯುತ್ತಿದೆ.ಬೆಂಗಳೂರಿಂದ ಆಗಮಿಸಿದ ವಿಶೇಷ ತಂಡ, ಹೊಳಲ್ಕೆರೆ ಹೊಸದುರ್ಗ ಅರಣ್ಯ ಇಲಾಖೆ ಸಿಬ್ಬಂದಿಗಳು ಹಾಗೂ ಸಾರ್ವಜನಿಕರ ಸಹಕಾರದಿಂದ ಕರಡಿ ಚಲನವಲನ ಗಮನಿಸಿ ಬೋನ್ ಅಳವಡಿಸಲಾಗಿತ್ತು.ಬೋನ್ ನಲ್ಲಿ ಕರಡಿ ಆಕರ್ಷಿಸಲು ಬಾಳೆಹಣ್ಣು ಹಾಗೂ ಹಲಸಿನಹಣ್ಣು ಇಡಲಾಗಿದೆ, ವಾಸನೆ ಹಿಡಿದು ಬಂದ ಕರಡಿಯೊಂದು ಶನಿವಾರ ನಸುಕಿನಲ್ಲಿ ಬೋನ್ ಗೆ ಬಿದ್ದಿದೆ. ಬೆಳ್ಳಿಗ್ಗೆ ಅರಣ್ಯ ಇಲಾಖೆ ಸಿಬ್ಬಂದಿಗಳು ಪರಿಶೀಲನೆ ನಡೆಸುವ ವೇಳೆ ಇದನ್ನು ಗಮನಿಸಲಾಗಿದೆ. ಈ ಕುರಿತು ಅರಣ್ಯ ವಲಯ ಅಧಿಕಾರಿ ಸುಜಾತ ಮಾತನಾಡಿ, ಪಟ್ಟಣದಲ್ಲಿ ಶುಕ್ರವಾರ ಅಯ್ಯಪ್ಪಸ್ವಾಮಿ ಬಡಾವಣೆಯಲ್ಲಿ ಸೆರೆ ಹಿಡಿದಿದ್ದ ಕರಡಿಯನ್ನು ಬಳ್ಳಾರಿಗೆ ರವಾನಿಸಲಾಗಿದೆ. ಅರವಳಿಕೆ ಚುಚ್ಚುಮದ್ದು ನೀಡಿದ ಹಿನ್ನಲೆಯಲ್ಲಿ ಅದನ್ನು ತಪಾಸಣೆಯಲ್ಲಿಡಲಾಗಿದೆ.

## ಪ್ರಮುಖ ಸುದ್ದಿ

# ಆರ್ಥಿಕ ಸಬಲತೆ ಹೊಂದಿದ ಬ್ಯಾಕ್‌ನಲ್ಲಿ ಚಳ್ಳಕೆರೆ ಟೌನ್ ಬಳಕೆದಾರರ ಸಂಘ ಸಹ ಒಂದಾಗಿದೆ : ಶೇರುದಾರರ ಹಿತರಕ್ಷಣೆಯಲ್ಲಿ ಮುಂದೆ

» ಚಳ್ಳಕೆರೆ

ಕಳೆದ ಸುಮಾರು 81 ವರ್ಷಗಳಿಂದ ಚಳ್ಳಕೆರೆ ತಾಲ್ಲೂಕಿನ ಸಹಕಾರಿ ಕ್ಷೇತ್ರದಲ್ಲಿ ತನ್ನದೇಯಾದ ಮೌಲ್ಯವನ್ನು ಕಾಪಾಡಿಕೊಂಡು ಬಂದಿರುವ ಚಳ್ಳಕೆರೆ ಟೌನ್ ಬಳಕೆದಾರರ ಹಾಗೂ ಪತ್ತಿನ ಸಹಕಾರಿ ಸಂಘ ನಿಯಮಿತ ಶೇರುದಾರರಿಗೆ ಆರ್ಥಿಕ ನೆರವು ನೀಡುವಲ್ಲಿ ಸಫಲವಾಗಿದ್ದು, ಬ್ಯಾಂಕಿನ ಪ್ರಗತಿಗೆ ಕೈಜೋಡಿಸಿದ ಎಲ್ಲಾ ಸಹಕಾರಿ ಬಂಧುಗಳಿಗೆ, ಶೇರುದಾರರಿಗೆ, ಬ್ಯಾಂಕ್‌ನ ಆಡಳಿತ ಮಂಡಳಿ ನಿರ್ದೇಶಕರು ಹಾಗೂ ಸಿಬ್ಬಂದಿ ವರ್ಗಕ್ಕೆ ಅಭಿನಂದನೆ ಸಲ್ಲಿಸುವುದಾಗಿ ಅಧ್ಯಕ್ಷ ಬಿ.ವಿ.ಶ್ರೀನಿವಾಸ್‌ರಾಜು ತಿಳಿಸಿದರು.



ಅವರು, ಶುಕ್ರವಾರ ಬ್ಯಾಂಕ್ ಆವರಣದಲ್ಲಿ ಪ್ರಸ್ತುತ 2022-23ನೇ ಸಾಲಿನ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾರಂಭದ ಹಂತದಲ್ಲಿ ಕೇವಲ ಕೆಲವೇ ಶೇರುದಾರರನ್ನು ಹೊಂದಿದ್ದ ಬ್ಯಾಂಕ್ 1942ರಲ್ಲಿ ಪ್ರಾರಂಭವಾಗಿ 81 ವಸಂತಗಳನ್ನು ಪೂರೈಸಿದೆ. ಪ್ರಸ್ತುತ ಬ್ಯಾಂಕ್‌ನಲ್ಲಿ 823 ಶೇರುದಾರರಿದ್ದು, ಅಂದಾಜು 3.26 ಲಕ್ಷ ಲಾಭವನ್ನು ಬ್ಯಾಂಕ್ ಗಳಿಸಿದೆ. ಇಂದು ಕೋಟಿಗಟ್ಟಲೇ ವ್ಯವಹಾರವನ್ನು ಮಾಡಲು ಬ್ಯಾಂಕ್ ಸಶಕ್ತವಾಗಿದ್ದು, ಇದಕ್ಕೆ ಎಲ್ಲರ ಸಹಕಾರ ಪ್ರೇರಣೆ. ಶೇರುದಾರರಿಗೆ ಇನ್ನೂ ಹೆಚ್ಚಿನ ಆರ್ಥಿಕ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಬ್ಯಾಂಕ್ ಆಡಳಿತ ಮಂಡಳಿ ಚಿಂತನೆ ನಡೆಸಿದೆ. ರಾಜ್ಯ ಸರ್ಕಾರದಿಂದ ಅತ್ಯುತ್ತಮ ಸಹಕಾರಿ ಸಂಘ ಎಂಬ ಪ್ರಶಸ್ತಿಯನ್ನು ಸಹ ಬ್ಯಾಂಕ್ ಪಡೆದಿದೆ ಎಂದರು.

ಪ್ರಭಾರ ವ್ಯವಸ್ಥಾಪಕ ಆರ್. ಎಂ.ನಜೀಮ್ ಮಾಹಿತಿ ನೀಡಿ, ಮಾರ್ಚ್-2023ರ ಅಂತ್ಯಕ್ಕೆ 43 ಲಕ್ಷ ಠೇವಣಿಯನ್ನು ಹೊಂಡಿ, 65 ಲಕ್ಷ ಸಾಲವನ್ನು ನೀಡಿದೆ. ಸಾಲ ವಸೂಲಾತಿಯಲ್ಲಿ ಬೀಗಿಕ್ರಮ ಅನುಸರಿಸಲಾಗಿದೆ. ಬಳಕೆದಾರರ ವಿಭಾಗದಲ್ಲಿ 2.61 ಲಕ್ಷ ವಹಿವಾಟು ನಡೆದಿದ್ದು,1.54 ಲಕ್ಷ ಲಾಭ ಪಡೆಯಲಾಗಿದೆ ಎಂದು ಮಾಹಿತಿ ನೀಡಿದರು.

ಉಪಾಧ್ಯಕ್ಷ ಕೋಟೆ ಚಂದ್ರಶೇಖರ್ ಮಾಹಿತಿ ನೀಡಿ, ಪ್ರತಿವರ್ಷವೂ ಬ್ಯಾಂಕ್ ಲಾಭದತ್ತ ಮುನ್ನಡೆದಿದೆ. ಬ್ಯಾಂಕ್‌ನ ಹಿರಿಯ ಸಹಕಾರಿ ದುರೀಣರು ಹಾಲಿ ನಿರ್ದೇಶಕರಾದ ಸಿ.ಬಿ.ಆದಿಭಾಸ್ಕರ್‌ಶೆಟ್ಟಿಯವರಿಗೆ ರಾಜ್ಯಮಟ್ಟದ ಸಹಕಾರ ರತ್ನ ಪ್ರಶಸ್ತಿ ಬಂದಿದ್ದು, ಅವರನ್ನು ಬ್ಯಾಂಕ್ ಆಡಳಿತ ಮಂಡಳಿ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು. ಬ್ಯಾಂಕ್‌ನ ಅಭಿವೃದ್ಧಿಯ ಬಗ್ಗೆ ಮಾಜಿ ಅಧ್ಯಕ್ಷ ಸಿ.ಬಿ.ತ್ಯಾಗರಾಜು, ಎಂ.ಎನ್.ಮೃತ್ಯುಂಜಯ, ನಗರಸಭಾ ಸದಸ್ಯ ಶಿವಕುಮಾರ್, ಕೆ.ಎಸ್.ನಾಗರಾಜು, ನಾಗಣ್ಣಗೌಡ್ರು, ತಿಪ್ಪೇಸ್ವಾಮಿ, ಕೋಟೆ ಬಸವರಾಜು, ತಿರುಮಲೇಶ್ ಮುಂತಾದವರು ಸಲಹೆ ನೀಡಿದರು.

ವಾರ್ಷಿಕ ಮಹಾಸಭೆಯಲ್ಲಿ ನಿರ್ದೇಶಕರಾದ ಎಂ.ಸಂಜೀವಪ್ಪ, ಎ.ವೀರಣ್ಣ, ಜಿ.ವಿ.ಮಂಜುನಾಥ, ಕೆ.ಎಂ. ದೊಡ್ಡಲಿಂಗಚಾರ್, ಡಿ.ಕೆ.ರವಿಕುಮಾರ್, ಬಿ.ಬೋರಯ್ಯ, ಸಿಬ್ಬಂದಿಯಾದ ಬಿ.ಎಂ.ಮಂಜುನಾಥ, ಎಂ.ರಘುನಾಗ, ಟಿ.ತಿಪ್ಪೇರುದ್ರ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಭರಮಸಾಗರದಲ್ಲಿ ವನಮಹೋತ್ಸವ




» **ಭರಮಸಾಗರ**

ಸಸ್ಯರಾಶಿಯನ್ನು ಬೆಳೆಸುವ ಮೂಲಕ ಭೂ ವಾತಾವರಣದ ಸಮತೋಲನ ಕಾಪಾಡಬೇಕು ಎಂದು ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ಎಚ್.ಎನ್.ತಿಪ್ಪೇಸ್ವಾಮಿ ಹೇಳಿದರು.ಇಲ್ಲಿನ ಸರ್ಕಾರಿ ಉನ್ನತೀಕರಿಸಿದ ಶಾಲೆಯಲ್ಲಿ ಆಯೋಜಿಸಿದ್ದ ವನ ಮಹೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಕಾಡುಗಳ ರಕ್ಷಣೆ ಪೋಷಣೆ ನಮ್ಮೆಲ್ಲರ ಮೇಲಿದೆ. ಸಸ್ಯಗಳನ್ನು ಬೆಳೆಸುವ ಕಲೆಯನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದರು.ಚಿತ್ರದುರ್ಗ ಅರಣ್ಯ ಇಲಾಖೆಯ ವಲಯ ಅರಣ್ಯ ಅಧಿಕಾರಿ ಉಷಾದೇವಿ ಮಾತನಾಡಿ ಸಸ್ಯ ಸಂಪತ್ತಿನ ಉಳಿವಿಗೆ ಇಂದಿನ ಯುವ ಪೀಳಿಗೆ ಶ್ರಮಿಸಬೇಕು. ನಾಡಿನ ಉಳಿವಿಗೆ ಕಾಡುಗಳೇ ಜೀವಾಳ ಎಂದರು. ಅರಣ್ಯ ಇಲಾಖೆಯಿಂದ ಪೂರೈಸಲಾದ ಸುಮಾರು 100 ಸಸ್ಯಗಳನ್ನು ಶಾಲಾ ಆವರಣದಲ್ಲಿ ನೆಡಲಾಯಿತು. ಸಸ್ಯಗಳ ಪಾಲನೆ ಪೋಷಣೆಯನ್ನು ಶಾಲಾ ವಿದ್ಯಾರ್ಥಿಗಳಿಗೆ ವಹಿಸಲಾಯಿತು.ಅರಣ್ಯ ಅಧಿಕಾರಿಗಳಾದ ರುದ್ರಮುನಿ, ಮೇಘನಾ, ಮುಖ್ಯ ಶಿಕ್ಷಕ ರಾದ ಜಿ.ಮಹೇಶ್, ಮುಬಾರಕ್, ಎಸ್ ಡಿಎಂಸಿ ಅಧ್ಯಕ್ಷ ರಷೀದ್, ಸಿಆರ್ ಪಿ ವರಲಕ್ಷ್ಮೀ, ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ರಾಜು ನಾಯ್ಕ್ , ಶಾಲಾ ಶಿಕ್ಷಕರು, ಗ್ರಾಮಸ್ಥರು ಇದ್ದರು.

### ವಿದ್ಯಾರ್ಥಿಗಳು ಅಂಕಗಳ ಹಿಂದೆ ಓಡದೆ ಜ್ಞಾನದ ಹಿಂದೆ ಓಡಿ:ಪಿ.ಕೆ. ಸಂತೋಷ್ ಕುಮಾರ್




» **ನಮ್ಮ ಜನ ವಾರ್ತೆ ಚಿತ್ರದುರ್ಗ**

ವಿದ್ಯಾರ್ಥಿಗಳು ಅಂಕಗಳ ಹಿಂದೆ ಓಡದೆ ಜ್ಞಾನದ ಹಿಂದೆ ಓಡಿದರೆ ಜೀವನದ ಗುರಿಯನ್ನು ಸಾಕಾರಗೊಳಿಸಿಕೊಳ್ಳಲು ಹೆಚ್ಚು ಅವಕಾಶವಾಗುತ್ತದೆ ಎಂದು ಪಿ.ಕೆ.ಎಸ್ ಫೌಂಡೇಶನ್ ನ ಕಾರ್ಯದರ್ಶಿ ಸಂತೋಷ್ ಕುಮಾರ್ ತಿಳಿಸಿದರು. ನಗರದ ಸರ್ಕಾರಿ ಪ್ರೌಢಶಾಲೆ ಕೋಟೆ ಶಾಲೆಯ ಮಕ್ಕಳಿಗೆ ಪಿ.ಕೆ.ಎಸ್ ಫೌಂಡೇಶನ್(ರಿ) ಚಿತ್ರದುರ್ಗ ಇವರಿಂದ "ಪುಸ್ತಕ ನಿಧಿ" ವಿದ್ಯಾರ್ಥಿಗಳಿಂದ ವಿದ್ಯಾರ್ಥಿಗಳಿಗೆ ಸಹಾಯ ಹಸ್ತದ ಬೆಸುಗೆ ಎಂಬ ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಪುಸ್ತಕಗಳನ್ನು ವಿತರಿಸಿ ಮಾತನಾಡಿದರು.ವಿದ್ಯಾರ್ಥಿಗಳು ಅಂಕಗಳು , ಪದವಿಗೆ, ಉದ್ಯೋಗಕ್ಕೆ ಒಂದು ವಿಭಾಗಕ್ಕೆ ಸೀಮಿತ ಗೊಳಿಸಬಹುದು ಆದರೆ ಜ್ಞಾನ ಎಲ್ಲ ರಂಗದಲ್ಲಿ ಸಲ್ಲುತ್ತದೆ, ಮಕ್ಕಳು ವಿದ್ಯಾರ್ಥಿ ಜೀವನದಲ್ಲಿ ಎಲ್ಲಾವನ್ನು ಕಲಿಯಬೇಕು. ಪ್ರತಿಯೊಬ್ಬ ವಿದ್ಯಾರ್ಥಿಗಳು ದೇಶ ಕಟ್ಟುವ ದೊಡ್ಡ ಜವಾಬ್ದಾರಿಯನ್ನು ಹೊಂದಿದ್ದು ವಿದ್ಯಾರ್ಥಿ ಜೀವನದಲ್ಲಿ ಸಾಮಾಜಿಕ ಕಳಕಳಿ ಬೆಳೆಸಿಕೊಂಡು ಅಧ್ಯಯನ ಮಾಡಿದರೆ ಯಶಸ್ವಿಯಾಗಬಹುದು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಮುಖ್ಯೋಪಾಧ್ಯಾಯಿನಿ ಸೌಮ್ಯ ಕುಮಾರಿ ಮಾತನಾಡಿ ಸಹಾಯ ಮಾಡುವ ವ್ಯಕ್ತಿಗಳು ಎಲ್ಲಿಯ ವರೆಗೂ ಮುಂದೆ ಬರುತ್ತಾರೋ ಅಲ್ಲಿಯವರೆಗೂ ಬಡ ವಿದ್ಯಾರ್ಥಿಗಳು ಹೆಚ್ಚಿನ ಶಿಕ್ಷಣ ಪಡೆಯಲು ಅವಕಾಶ ವಾಗುತ್ತದೆ ಎಂದರು. ರವಿಶಂಕರ್ ರವರು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.. ಈ ಸಂದರ್ಭದಲ್ಲಿ ರವಿಶಂಕರ್ , ಶಾಲೆಯ ವಿದ್ಯಾರ್ಥಿಗಳು , ಶಿಕ್ಷಕರು ಭಾಗವಹಿಸಿದ್ದರು.

### ದತ್ತಿನಿಧಿ ಪ್ರಶಸ್ತಿಗೆ ರಶ್ಮಿ ಎಸ್. ಆಯ್ಕೆ

» **ಗದಗ**

ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ನೀಡುವ 2023ನೇ ಸಾಲಿನ 'ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ದತ್ತಿನಿಧಿ ಪ್ರಶಸ್ತಿ'ಗೆ 'ಪ್ರಜಾವಾಣಿ'ಯ ಮುಖ್ಯ ಉಪಸಂಪಾದಕಿ ರಶ್ಮಿ ಎಸ್. ಆಯ್ಕೆಯಾಗಿದ್ದಾರೆ. ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಹೆಬ್ಬಳ್ಳಿ ಹಾಗೂ ಅವ್ವ ಸೇವಾ ಟ್ರಸ್ಟ್ ಸಂಚಾಲಕ ಡಾ. ಬಸವರಾಜ ಧಾರವಾಡ ನೇತೃತ್ವದ ಸಮಿತಿ ಈ ಆಯ್ಕೆ ಮಾಡಿದೆ. ಈ ಪ್ರಶಸ್ತಿಯು □10 ಸಾವಿರ ನಗದು ಹಾಗೂ ಫಲಕ ಒಳಗೊಂಡಿದೆ. ಜುಲೈ 16 ರಂದು ಗದಗ ನಗರದಲ್ಲಿ ನಡೆಯಲಿರುವ ಗದಗ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆಯಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು. 'ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಅವ್ವ ಸೇವಾ ಟ್ರಸ್ಟ್‌ನವರು ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ದತ್ತಿನಿಧಿ ಸ್ಥಾಪಿಸಿದ್ದು, ಪತ್ರಕರ್ತೆಯರಿಗೆ ನೀಡುವ ರಾಜ್ಯ ಮಟ್ಟದ ಮೊದಲ ಪ್ರಶಸ್ತಿ ಇದಾಗಿದೆ' ಎಂದು ಪ್ರಕಟಣೆ ತಿಳಿಸಿದೆ.

# ಸಾರ್ವಜನಿಕರಿಗೆ ಸಂದೇಶ, ಮಾಹಿತಿ ತಿಳಿಸುವ ಅಂಚೆ ಕಾರ್ಯದ ಬಗ್ಗೆ ಸಾರ್ವಜನಿಕರ ಮೆಚ್ಚುಗೆ

» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ನಗರ ಪ್ರದೇಶದಿಂದ ಗ್ರಾಮೀಣ ಪ್ರದೇಶದ ತನಕ ಅತ್ಯಂತ ವಿಶ್ವಾಸರ್ಹವಾಗಿ ಕಾರ್ಯನಿರ್ವಹಿಸುವ ಇಲಾಖೆ ಎಂದರೆ ಅದು ಕೇಂದ್ರ ಸರ್ಕಾರದ ಅಂಚೆ ಇಲಾಖೆ. ಅಂಚೆ ಇಲಾಖೆ ಇಂದು ಜನಸಾಮಾನ್ಯರ ಮೆಚ್ಚುಗೆ ಪಾತ್ರವಾಗಿರುವುದು ತನ್ನದೇಯಾದ ನಮ್ರತೆಯ ಸೇವೆಯಿಂದ ಎಂದು ಪೋಸ್ಟಲ್ ಇನ್ಸ್‌ಪೆಕ್ಟರ್ ರಾಜನ್‌ಕುಮಾರ್ ತಿಳಿಸಿದರು.

ಅವರು, ಶನಿವಾರ ನಗರದ ಸಹ್ಯಾದ್ರಿ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಸಾರ್ವಜನಿಕ ಸೇವೆಯಲ್ಲಿ ಅಂಚೆ ಇಲಾಖೆಯ ಪಾತ್ರ ಎಂಬ ಕಾರ್ಯಗಾರಕ್ಕೆ ಚಾಲನೆ ನೀಡಿ ಮಾತನಾಡಿದರು. ಅಂಚೆ ಇಲಾಖೆ ಹಲವಾರು ವರ್ಷಗಳ ಕಾಲ ಕೇವಲ ಪತ್ರವ್ಯವಹಾರ ಮಾಡುವ ಮೂಲಕ ಜನರ ಗಮನ ಸೆಳೆಯಿತು. ಹಿಂದಿನ ಕಾಲದಲ್ಲಿ



ಹೆಚ್ಚಿನ ಪ್ರಮಾಣದ ಸಂಚಾರ ವ್ಯವಸ್ಥೆ ಇಲ್ಲದ ಕಾರಣ, ರಾಜ, ಮಹಾರಾಜರು ಪಾರಿವಾಳದ ಮೂಲಕ ಸಂದೇಶವನ್ನು ರವಾನಿಸುತ್ತಿದ್ದರು. ಅದೇ ಪದ್ಧತಿಯನ್ನು ಇನ್ನಷ್ಟು ಬದಲಾವಣೆಯಿಂದ ಅಂಚೆ ಇಲಾಖೆ ಜಾರಿಗೆ ತಂದಿತು. ಈಗ ಪತ್ರ ವ್ಯವಹಾರಗಳ ಜೊತೆಗೆ ಪಾರ್ಸಲ್, ವಿವಿಧ ಉಳಿತಾಯ ಖಾತೆ, ಡಿಪಾಜಿಟ್, ಹಿರಿಯ ನಾಗರೀಕರಿಗೆ ರಿಯಾಯ್ತಿ ಹೀಗೆ ಹಲವಾರು ಯೋಜನೆ ರೂಪಿಸಿದೆ. ವೃದ್ದಾಪ್ಯವೇತನವೂ ಸೇರಿದಂತೆ ಹಲವಾರು ಕೇಂದ್ರ, ರಾಜ್ಯ ಸರ್ಕಾರ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವ ಕಾರ್ಯ ಅಂಚೆ ಇಲಾಖೆ ಮಾಡುತ್ತಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಉಪಾಧ್ಯಕ್ಷ ಚ ಿಕ್ಕ ವ ು ಂ ಡಿ ರಾ ವ ು ಪ್ರ ಸಾ ದ್ ಮಾತನಾಡಿ, ಕೇವಲ ನಗರ ಪ್ರದೇಶಗಳಿಗೆ ಸೀಮಿತವಾಗಿದ್ದ ಅಂಚೆ ಇಲಾಖೆ ಕಾರ್ಯ ಇಂದು ಅಂತರಾಷ್ಟ್ರೀಯ ಮಟ್ಟದಲ್ಲಿದೆ. ಅಂಚೆ ಇಲಾಖೆ ತನ್ನದೇಯಾದ ದಕ್ಷತೆ, ವಿಶ್ವಾಸ, ನಂಬಿಕೆಯಿಂದ ಜನರ ಗೌರವ ಗಳಿಸಿದೆ. ಅಂಚೆ ಇಲಾಖೆಯ ಎಲ್ಲಾ ಕಾರ್ಯಗಳು ಪ್ರಾಮಾಣಿಕತೆಯಿಂದ ಕೂಡಿವೆ. ಅಂಚೆ ಎಲ್ಲರ ಅಚ್ಚುಮೆಚ್ಚಿನ ಇಲಾಖೆ ಎಂದರು.

ಪ್ರೌಢಶಾಲೆ ಮುಖ್ಯ ಶಿಕ್ಷಕಿ ಶಾಹೀನಾ, ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕಿ ಪವಿತ್ರ, ಶಿಕ್ಷಕರಾದ ಎಚ್.ಮಂಜುನಾಥ, ಕಾವ್ಯಶ್ರೀ, ಸಂತೋಷ್, ಮಹಂತೇಶ್, ತಿಪ್ಪೇಸ್ವಾಮಿ, ನಸೀರ್ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ನವ ಚಿತ್ರದುರ್ಗ ನಿರ್ಮಾಣಕ್ಕೆ ಎಲ್ಲಾರೂ ಕೈ ಜೋಡಿಸಿ: ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ

» **ನಮ್ಮ ಜನ ವಾರ್ತೆ ಚಿತ್ರದುರ್ಗ**

ಮೂವತ್ತು ವರ್ಷದ ಸಮಸ್ಯೆಗಳಿಗೆ ಪರಿಹಾರ ಒದಗಿಸಿಕೊಂಡು ಎಲ್ಲಾರ ಸಲಹೆಗಳನ್ನು ಪಡೆದುಕೊಂಡು ಚಿತ್ರದುರ್ಗದ ಸಮಗ್ರ ಅಭಿವೃದ್ಧಿಗೆ ಕೆಲಸವನ್ನು ಮಾಡುತ್ತೇನೆ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ತಿಳಿಸಿದರು.

ನಗರದ ಐಯ್ಯಣ್ಣ ಪೇಟೆಯ ವಾಸವಿ ಸ್ಕೂಲ್ ಮುಂಭಾಗದ ತ್ಯಾಗರಾಜ್ ಮಾರುಕಟ್ಟೆ ನಿರ್ಮಾಣದ ಶಂಕುಸ್ಥಾಪನೆಯನ್ನು ನೇರವೇರಿಸಿ ಮಾತನಾಡಿದರು.

ನಾನು ಈಗ ಹೊಸದಾಗಿ ಶಾಸಕನಾಗಿ ಆಯ್ಕೆ ಆಗಿದ್ದೇನೆ.ಕ್ಷೇತ್ರದಲ್ಲಿ ಹೋದ ಕಡೆಯಲ್ಲಿ ಎಲ್ಲಾ 30 ವರ್ಷದ ಸಮಸ್ಯೆಯನ್ನು ಜನತೆ ಹೇಳಿಕೊಳ್ಳುತ್ತಿದ್ದು ಅಂತಹ ಸಮಸ್ಯೆಗಳನ್ನು ಸರಿಪಡಿಸುವ ಮತ್ತು ತೇಪೆ ಹಚ್ಚುವ ಕಾರ್ಯವನ್ನು ಮಾಡಲಾಗುತ್ತಿದೆ. ಸಮಸ್ಯೆಗಳ ಪರಿಹಾರಕ್ಕೆ ಎಲ್ಲರೂ ಸಹಕಾರವನ್ನು ನೀಡಬೇಕು ಎಂದರು.

ನಗರದಲ್ಲಿ ಸಾಕಷ್ಟು ಹಿರಿಯರು ಇದ್ದು ಅವರು ಸಲಹೆಯನ್ನು ನೀಡಬೇಕು. ನಮ್ಮ ತಂದೆಯ ಸ್ನೇಹಿತರು ಸಹಾ ಇದ್ದಾರೆ. ಎಲ್ಲಾರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡುತ್ತೇನೆ.

ಈಗ ಚುನಾವಣೆ ಮುಗಿದಿದ್ದು ನನಗೆ ಎಷ್ಟು ಮತ ಬಂದಿತ್ತು, ಯಾರು ಮತವನ್ನು ಹಾಕಿದ್ದಾರೆ ಎಂಬುದು ನನ್ನ ಗಮನದಲ್ಲಿ ಇಲ್ಲ, ಇದರ ಬಗ್ಗೆ ಯೋಚನೆಯನ್ನು ಸಹಾ ಮಾಡುವವನು ನಾನಲ್ಲ ನನ್ನದು ಅಭಿವೃದ್ಧಿ ಮಂತ್ರವಾಗಿದೆ.

ಚಿತ್ರದುರ್ಗದ ಸಮಸ್ತ ಜನತೆ ಹೆಚ್ಚಿನ ಮತಗಳಿಂದ ನನ್ನನು ಆಯ್ಕೆ ಮಾಡಿದ್ದಾರೆ. ಈಗ ನಾನು ಚಿತ್ರದುರ್ಗ ಕ್ಷೇತ್ರಕ್ಕೆ ಶಾಸಕ. ಆ ಭಾಗದಲ್ಲಿ ಮತಗಳು ಜಾಸ್ತಿ ಬಂದಿತ್ತು ಈ ಭಾಗದಲ್ಲಿ ಕಡಿಮೆ



ಬಂದಿತ್ತು ಎಂಬ ಮಾತುಗಳು ನನ್ನ ಬಳಿ ಇಲ್ಲ ಎಂದು ತಾರತಮ್ಯ ಮಾಡುವುದಿಲ್ಲ. ಯಾರು ಮನಸ್ಸಿನಲ್ಲಿ ಇಂತಹ ಭಾವನೆ ಇಟ್ಟುಕೊಳ್ಳಬೇಡಿ ಎಂದು ಮತದಾರರಿಗೆ ಸಂದೇಶ ನೀಡಿದರು. ತ್ವರಿತಿಗತಿಯಲ್ಲಿ ಚಿತ್ರದುರ್ಗವನ್ನು ಅಭಿವೃದ್ಧಿಯ ಕಡೆಗೆ ತೆಗೆದುಕೊಂಡು ಹೋಗೋಣ ನಾವೆಲ್ಲಾ ಸೇರಿ ನವ ಚಿತ್ರದುರ್ಗವನ್ನು ನಿರ್ಮಾಣ ಮಾಡೋಣ ಎಂದು ಶಾಸಕ ವಿರೇಂದ್ರ ತಿಳಿಸಿದರು. ನಾನು ಮಾರುಕಟ್ಟೆ ಪೂಜೆಗೆ ಬರುವಾಗ ಜನತೆ ಈ ಮಾರುಕಟ್ಟೆ ನಿರ್ಮಾಣದ ಬಗ್ಗೆ ಅವರ ಅಭಿಪ್ರಾಯವನ್ನು ತಿಳಿಸಿದ್ದಾರೆ. ಜನರಿಗೆ ಮಾತನ್ನು ನೀಡಿದ್ದು ತ್ವರಿತಗತಿಯಲ್ಲಿ ಮಾರುಕಟ್ಟೆಯನ್ನು ನಿರ್ಮಾಣ ಮಾಡಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಮಾಜಿ ನಗರಸಭೆ ಅಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ ಮಾತನಾಡಿ ಈ ಮಾರುಕಟ್ಟೆ ಪುರಾತನವಾಗಿದ್ದು ತನ್ನದೇ ಆದ ಇತಿಹಾಸವನ್ನು ಹೊಂದಿದೆ. ಈ ಮಾರುಕಟ್ಟೆ ಈ ಹಿಂದೆ ಚಿತ್ರದುರ್ಗಕ್ಕೆ ಇದು ಒಂದೇ ಮಾರುಕಟ್ಟೆ ಆಗಿತ್ತು, ಇದನ್ನು ಉತ್ತಮವಾಗಿ ನಿರ್ಮಾಣ ಮಾಡಬೇಕಿದೆ. ಶಾಸಕರ ಬಗ್ಗೆ ಈ ಹಿಂದೆ ಹಲವಾರು ಜನತೆ ವಿವಿಧ ರೀತಿಯಲ್ಲಿ ಮಾತನಾಡಿದ್ದರು. ಈಗ ಅವರ ಕಾರ್ಯು ವೈಖರಿ ಏನು ಎಂಬುದು ತಿಳಿಯುತ್ತಿದೆ. ಚಿತ್ರದುರ್ಗಕ್ಕೆ ಅತಿ ಅಗತ್ಯವಾದ ಮೆಡಿಕಲ್ ಕಾಲೇಜು, ಜಿಲ್ಲಾಧಿಕಾರಿಗಳ ಕಚೇರಿ ನಿರ್ಮಾಣಕ್ಕೆ ಮುಖ್ಯಮಂತ್ರಿಗಳ ಬಳಿ ಹೋಗಿ ಅನುಮತಿಯನ್ನು ತಂದಿದ್ದಾರೆ. ಇವುಗಳು ತ್ವರಿತಗತಿಯಲ್ಲಿ ನಿರ್ಮಾಣ ಮಾಡತ್ತಾರೆ ಎಂಬ ವಿಶ್ವಾಸವಿದೆ ನಮಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾಗರಾಜ್, ನಗರಸಭಾ ಸದಸ್ಯರಾದ ಹರೀಶ್, ವೆಂಕಟೇಶ್, ಮಾಜಿ ಸದಸ್ಯರಾದ ಡಿ.ಸಿ.ಸುರೇಶ್, ರಾಜೇಶ್, ಕಾಂಗ್ರೆಸ್ ಮುಖಂಡರಾದ ಎನ್.ಡಿ.ಕುಮಾರ್, ನಿತಿನ್, ಇಫಾಲ್, ಗುತ್ತಿಗೆದಾರರಾದ ಕುಮಾರ್, ಹೇಮಂತ್, ವಸಂತ ಕುಮಾರ್ ಮತ್ತು ಸ್ಥಳೀಯ ಮುಖಡರು ಭಾಗವಹಿಸಿದ್ದರು.

# ಚಿತ್ರದುರ್ಗ: 3 ದಿನ ಪರಿಸರ ನಡಿಗೆ



» **ಚಿತ್ರದುರ್ಗ**

ಮಧ್ಯ ಕರ್ನಾಟಕದಲ್ಲಿಯೇ ಚಿತ್ರದುರ್ಗ ವಿಶೇಷವಾದ ಸ್ಥಳ ಎನಿಸಿಕೊಂಡಿದೆ. ಸಾಹಿತಿ, ಸಂಶೋಧಕರು, ಕಲಾವಿದರನ್ನು ಕೊಟ್ಟ ಊರು ಚಿತ್ರದುರ್ಗ. ಅನೇಕ ಕ್ರೀಡಾಪಟುಗಳು, ನಟ-ನಟಿಯರು ಇಲ್ಲಿಗೆ ಬಂದು ಹೋಗಿದ್ದಾರೆ. ಎಲ್ಲದಕ್ಕೂ ಹೇಳಿ ಮಾಡಿಸಿದಂತ ಜಾಗ ಇದು ಎಂದು ಸಂಶೋಧಕ ಡಾ.ಬಿ.ರಾಜಶೇಖರಪ್ಪ ಹೇಳಿದರು.ಕೋಟೆ ಸಮೀಪವಿರುವ ಡಾರ್ಮೆಟ್ರಿಯಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಚಿಂತನಶೀಲ ಸಮಾಜಮುಖಿ ನಡೆದು ನೋಡ ಕರ್ನಾಟಕ-15 ಪರಿಸರ ನಡಿಗೆಯನ್ನು ಉದ್ದೇಶಿಸಿ ಮಾತನಾಡಿದ ಡಾ.ಬಿ.ರಾಜಶೇಖರಪ್ಪನವರು ಶ್ರೀಲಂಕಾದ ಸಂಜಾತ ಅಮೇರಿಕಾ ವಾಸಿ ಸಿರಿ ಪೊನ್ನಂ ಪೆರುಮ ಹೇಳಿಕೆ ಪ್ರಕಾರ 380 ಕೋಟಿ ವರ್ಷದ ಹಿಂದೆ ಇಲ್ಲಿ ಜೀವ ಉಗಮವಾಗಿತ್ತು. ಶಿಲಾಯುಗ, ಪ್ರಾಚೀನ ನೂತನ ಶಿಲಾಯುಗಕ್ಕೆ ಸಂಬಂಧಿಸಿದ ಮನುಷ್ಯನ ಚಟುವಟಿಕೆ ಜರುಗಿದೆ. ಮನುಷ್ಯ ವಾಸ ಮಾಡಿ ಭೇಟಿಯಾಡಿದ್ದಾನೆ. ಕ್ರಮೇಣ ಕೃಷಿಕ, ಸಾಂಸ್ಕೃತಿಕ ವ್ಯಕ್ತಿಯಾಗಿ ಮಾರ್ಪಟ್ಟಿದ್ದಾನೆ ಎನ್ನುವುದು ತಿಳಿಯುತ್ತದೆ ಎಂದರು.

ಕರ್ನಾಟಕದ ಪ್ರಮುಖ ರಾಜರ ಆಳ್ವಿಕೆಗೆ ಚಿತ್ರದುರ್ಗ ಒಳಪಟ್ಟಿದೆ. ಬಾದಾಮಿ, ಕದಂಬರು, ಗಂಗರು, ಬಾದಾಮಿ ಚಲುಕ್ಯ, ರಾಷ್ಟ್ರಕೂಟರು, ವಿಜಯನಗರ ಅರಸರು, ಕಲ್ಯಾಣ ಚಲುಕ್ಯರು, ಚಿತ್ರದುರ್ಗದ ಅರಸರು ಪ್ರಮುಖ ರಾಜ ವಂಶಸ್ಥರು ಆಳಿದ್ದಾರೆ. ಮಯೂರ ಶರ್ಮ ಕ್ಷತ್ರಿಯತ್ವವನ್ನು ಸ್ವೀಕಾರ ಮಾಡಿದ ನಂತರ ತನ್ನ ಹೆಸರನ್ನು ಮಯೂರ ವರ್ಮ ಎಂದು ಬದಲಾಯಿಸಿಕೊಳ್ಳುತ್ತಾನೆ. ಚಂದ್ರವಳ್ಳಿಯಲ್ಲಿ ಭೈರಸಿದ್ದೇಶ್ವರ ದೇವಸ್ಥಾನವಿದೆ. ಅದರ ಮುಂಭಾಗದ ಬಂಡೆಯ ಮೇಲೆ ಮೂರು ಸಾಲಿನ ಶಾಸನವಿದೆ. ಕೊಪ್ಪಳದ ಪ್ರಾಚೀನ ಹೆಸರು ಕೊಪ್ಪಣ. ಆರು ಮೆದಕರಿನಾಯಕರು ಇಲ್ಲಿ ಆಳಿದ್ದಾರೆ. ಮೊದಲನೆ ಇಮ್ಮಡಿ ಮೆದಕರಿನಾಯಕ, ಎರಡನೆ ಇಮ್ಮಡಿ ಮೆದಕರಿನಾಯಕ ಹೀಗೆ ಆರನೆ ಮೆದಕರಿನಾಯಕ ಹೈದರಾಲಿ ಜೊತೆ ಹೋರಾಡಿದ್ದಾನೆ. ಶಾತವಾಹನ ಕಾಲದಿಂದಲೂ ಚಂದ್ರವಳ್ಳಿಯಲ್ಲಿ ಜನ ಇದ್ದರು. ಮೊದಲು ಸೂಳ್ಗಲ್ ಎಂದು ಕರೆಯಲಾಗುತ್ತಿತ್ತು. ಸೂಳ್ಗಲ್ ಮೊಟ್ಟ ಮೊದಲ ಕದಂಬರ ರಾಜಧಾನಿಯಾಗಿತ್ತು ಎಂದು ಕೆಲವು ಪ್ರಮುಖ ಅಂಶಗಳನ್ನು ವಿವರಿಸಿದರು.ಚಂದ್ರಶೇಖರ ಬೆಳಗೆರೆ ಸಮಾಜಮುಖಿ ನಡೆದು ನೋಡ ಕರ್ನಾಟಕದ-15 ಪರಿಸರ ನಡಿಗೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

# ರಾಜ್ಯದ ಚುನಾವಣೆ ದೇಶಕ್ಕೆ ದಿಕ್ಸೂಚಿ: ಜಹದೀಶ್ ಶೆಟ್ಟರ್

**ಬೆಳಗಾವಿ:** ಕರ್ನಾಟಕದ ಚುನಾವಣೆ ದೇಶದ ರಾಜಕೀಯಕ್ಕೆ ದಿಕ್ಸೂಚಿ ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಹೇಳಿದ್ದಾರೆ. ಈ ಸಂಬಂಧ ಸವದತ್ತಿಯಲ್ಲಿ ಧಾರವಾಡ ಗ್ರಾಮೀಣ ಶಾಸಕ ವಿನಯ ಕುಲಕರ್ಣಿ ಹಮ್ಮಿಕೊಂಡಿದ್ದ ಮತದಾದರಿಗೆ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಕರ್ನಾಟಕದ ಚುನಾವಣೆ ಇಡೀ ದೇಶದ ರಾಜಕೀಯಕ್ಕೆ ದಿಕ್ಸೂಚಿಯಾಗಿದೆ. ಬದಲಾವಣೆಯ ದಿಕ್ಸೂಚಿ ಕರ್ನಾಟಕದಿಂದ ಆಗಿದೆ. ವಿಧಾನಸಭೆ ಚುನಾವಣೆ ಫಲಿತಾಂಶ ಇಲ್ಲಿಗೆ ನಿಲ್ಲುವುದಿಲ್ಲ. ಲೋಕಸಭಾ ಚುನಾವಣೆಯಲ್ಲಿಯೂ ಕಾಂಗ್ರೆಸ್ ಹೆಚ್ಚು ಸ್ಥಾನ ಗಳಿಸುತ್ತದೆ. ಬಿಜೆಪಿ ಮನೆಗೆ ಕಳುಹಿಸುವ ಕೆಲಸ ಆಗುತ್ತದೆ' ವಿಧಾನಸಭೆ ಚುನಾವಣೆ ಸೆಮಿ ಫೈನಲ್ ಆಗಿತ್ತು. ಲೋಕಸಭೆ ಚುನಾವಣೆ ಫೈನಲ್ ಮ್ಯಾಚ್ ಆಗಿದೆ. ಫೈನಲ್‌ನಲ್ಲಿ ಕಾಂಗ್ರೆಸ್ ಗೆಲುವು ಸಾಧಿಸುತ್ತದೆ. ಚುನಾವಣೆಯಲ್ಲಿ ಭರವಸೆ ಕೊಟ್ಟಿರುತ್ತೇವೆ ಎಷ್ಟೋ ಸಲ ಸರ್ಕಾರ ಬಂದು 6 ತಿಂಗಳಾದರೂ ಭರವಸೆಗಳು ಈಡೇರಿಲ್ಲ ಎಂದರು.

## ಪ್ರಮುಖ ಸುದ್ದಿ

# ರಾಜ್ಯದಲ್ಲಿ ಹೊಳಲ್ಕೆರೆ ಕಾಲೇಜು ಮಾದರಿಯಾಗಬೇಕು

» **ನಮ್ಮ ಜನ ವಾರ್ತೆ ಹೊಳಲ್ಕೆರೆ**

ಹೆಣ್ಣು ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗ ಬಾರದೆನ್ನುವ ಉದ್ದೇಶದಿಂದ 600 ಕೋಟಿ ರೂಗಳನ್ನು ಖರ್ಚು ಮಾಡಿ ಹಾಸ್ಟೆಲ್ ನಿರ್ಮಾಣ ಮಾಡಲಾಗಿದೆ ಎಂದು ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಹೇಳಿದರು.

ಹೊಳಲ್ಕೆರೆ ಪಟ್ಟಣದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಾಲೇಜು ಶಿಕ್ಷಣ ಇಲಾಖೆ ಮತ್ತು ದಾವಣಗೆರೆ ವಿಶ್ವವಿದ್ಯಾನಿಲಯ ವತಿಯಿಂದ ಸಾಂಸ್ಕೃತಿಕ, ಕ್ರೀಡಾ ರಾಷ್ಟೀಯ ಸೇವಾ ಯೋಜನೆ ರೆಡ್‌ಕ್ರಾಸ್ ಹಾಗೂ ರೋವರ್ ಮತ್ತು ರೇಂಜರ್ ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಹೊಳಲ್ಕೆರೆ ಪಟ್ಟಣದಲ್ಲಿ ಪ್ರಥಮ ದರ್ಜೆ ಕಾಲೇಜು ಇರಲಿಲ್ಲ, ಅದಕ್ಕಾಗಿ ಪಿ.ಯು. ಕಾಲೇಜು ಬೇಡವೆಂದು ಡಿಗ್ರಿ ಕಾಲೇಜು ಆರಂಭಿಸಲು ಸರ್ಕಾರದಿಂದ ಅನುದಾನ



ತಂದು ಹಣ ನೀಡಿದ್ದೇನೆ. ಪರಿಶಿಷ್ಟ ವರ್ಗದ ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ 7 ಕೋಟಿ ರೂ ವೆಚ್ಚದಲ್ಲಿ ಹಾಸ್ಟೇಲ್ ನಿರ್ಮಾಣ ಮಾಡಲಾಗಿದೆ. ರಾಜಕಾರಣಿಯಾದವನಿಗೆ ಇಚ್ಚಾಶಕ್ತಿ ಇದ್ದಾಗ ಮಾತ್ರ ಅಭಿವೃದ್ಧಿ ಕೆಲಸಗಳನ್ನು ಮಾಡಲು ಸಾಧ್ಯ. ಕಾಲೇಜಿನ 2ನೇ ಹಂತಸ್ತಿನ ಕಟ್ಟಡಕ್ಕಾಗಿ 2 ಕೋಟಿ ರೂಗಳನ್ನು ಮಂಜೂರು ಮಾಡಿದ್ದೇನೆ. ದೇಶದಲ್ಲಿ ಐ.ಎ.ಎಸ್ ಪರೀಕ್ಷೆ ಪಾಸಾದವರ ಪೈಕಿ ಶೇ.68 ರಷ್ಟು ಹೆಣ್ಣು ಮಕ್ಕಳು ಶೇ.32 ಗಂಡು ಮಕ್ಕಳು ಇದ್ದಾರೆ. ಇದರಿಂದ ಶಿಕ್ಷಣದಲ್ಲಿ ಹೆಣ್ಣು ಮಕ್ಕಳೇ ಮೇಲು ಗೈ ಎನ್ನುವುದು ಗೊತ್ತಾಗುತ್ತದೆ ಎಂದರು.

ಸರ್ಕಾರಿ ಶಾಲೆಗಳಿಗೆ ಮಕ್ಕಳು ಬರಲು ಉಚಿತ ವಾಹನದ ವ್ಯವಸ್ಥೆ ಕಲ್ಪಿಸಿದ್ದೇನೆ. ರಾಜ್ಯದ 224 ಕ್ಷೇತ್ರದಲ್ಲಿ ಎಲ್ಲಿಯೂ ಇಂತಹ ಅನುಕೂಲವಿಲ್ಲ. ಎಲ್.ಕೆ.ಜಿ ಯಿಂದ ಪಿ.ಯು.ಸಿ ಯವರೆಗೆ ನನ್ನ ಅನುದಾನದಲ್ಲಿ ಹಣ ನೀಡಿ ಗುಣ ಮಟ್ಟದ ಶಿಕ್ಷಣಕ್ಕೆ ಒತ್ತು ಕೊಟ್ಟಿದ್ದೇನೆ. ಅತ್ಯುತ್ತಮ ಈಜುಕೊಳ ಇನ್‌ಡೋರ್ ಸ್ಟೇಡಿಯಂ ನಿರ್ಮಾಣವಾಗಿದೆ. ಭರಮಸಾಗರ ಚಿಕ್ಕ ಹೋಬಳಿಯಲ್ಲಿ ಅತ್ಯುತ್ತಮ ಕಾಲೇಜು ಕಟ್ಟಿಸಿದ್ದೇನೆ. ಅಲ್ಲಿ 4 ರ್‍ಯಾಂಕ್ ಬಂದಿದೆ. ಹೊಳಲ್ಕೆರೆಯಲ್ಲಿ ಇಷ್ಟೆಲ್ಲಾ ಸೌಲಭ್ಯಗಳು ಇದ್ದರೂ ಏಕೆ ಬರುತ್ತಿಲ್ಲ. ಇದಕ್ಕೆ ಯಾರು ಹೊಣೆಗಾರರಲ್ಲ. ವಿದ್ಯಾರ್ಥಿಗಳಾದ ನೀವುಗಳು ಶ್ರದ್ದೆ ಮತ್ತು ಶ್ರಮ ಪಟ್ಟು ಓದಿ, ರ್‍ಯಾಂಕ್ ಪಡೆದು ಗುರು - ಹಿರಿಯರು, ತಂದೆ □ ತಾಯಿಯರು ಮತ್ತು ಊರಿಗೆ ಕೀರ್ತಿ ತರಬೇಕು. ಇಡೀ ರಾಜ್ಯದಲ್ಲಿಯೇ ಹೊಳಲ್ಕೆರೆ ಕಾಲೇಜು ಮಾದರಿಯಾಗಬೇಕೆಂದು ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಡಿ.ಆರ್. ಹನುಮಂತರಾಯ, ಡಾ.ಗಿರೀಶ್ ನಾಯಕ.ಟಿ, ಡಾ.ಎಲ್. ರಮೇಶ್, ಡಾ.ಪ್ರವೀಣ್‌ಕುಮಾರ್, ಡಾ.ವಿಜಯ್‌ಕುಮಾರ್, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ವಿವಿಧ ಸಮಿತಿಗಳ ಸಂಚಾಲಕರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸಮಾರಂಭದಲ್ಲಿ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T